# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 27 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–08–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 27 | Title- Code: KARKAN 28269 | Chitradurga | Date: 09-08-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಗಂಜಿಗುಂಟೆ ಸರ್ಕಾರಿ ಗೋಮಾಳ ಒತ್ತುವರಿದಾರರಿಗೆ ಮೌಖಿಕ ಸೂಚನೆ: ಇಒ 2

ಸಹಕಾರ ಕ್ರಿಯಾಶೀಲವಾಗಿಸಲು ಬೇಕಾದ ಮಾರ್ಗದರ್ಶನ ನೀಡಲು ಸಹಕಾರಿ ಸಿದ್ಧ 3

ಆ.11ರಂದು ವಾಲ್ಮೀಕಿ ಪ್ರತಿಭಾ ಪುರಸ್ಕಾರ ಮತ್ತು ವೃತ್ತಿ ಮಾರ್ಗದರ್ಶನ ಕಾರ್ಯಗಾರ 4



ಸುದ್ದಿ, ಜಾಹಿರಾತಿಗೆ
9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ ಮಾಹಿತಿ

# ಲೋಕ ಅದಾಲತ್: 4,973 ಪ್ರಕರಣ ಇತ್ಯರ್ಥ

» **ಚಿತ್ರದುರ್ಗ**

ಬರುವ ಸೆಪ್ಟೆಂಬರ್ 14 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ಪಕ್ಷಗಾರರು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಕಳೆದ ಜುಲೈ 13 ರಂದು ಜರುಗಿದ ರಾಷ್ಟ್ರೀಯ ಲೋಕ ಅದಾಲತ್‍ನಲ್ಲಿ ಜಿಲ್ಲೆಯಲ್ಲಿ ಬಾಕಿ ಇದ್ದ 4,973 ವ್ಯಾಜ್ಯ ಪ್ರಕರಣಗಳನ್ನು ರಾಜಿ ಸಂದಾನದ ಮೂಲಕ ಇತ್ಯರ್ಥ ಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ ಹೇಳಿದರು.

ಗುರುವಾರ ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕಳೆದ ಲೋಕ್ ಅದಾಲತ್‍ನಲ್ಲಿ 1,16,278 ವ್ಯಾಜ್ಯ ಪೂರ್ವ ಪ್ರಕರಣಗಳ ಜೊತೆಗೆ, ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ



ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದ 10 ಜೋಡಿಗಳ ಮನ ಒಲಿಸಿ ಪುನಃ ಒಂದು ಮಾಡಲಾಗಿದೆ. ಈ ಮೂಲಕ ಕೌಟುಂಬಿಕ ವಿಘಟನೆ ತಪ್ಪಿ, ಮಕ್ಕಳಿಗೆ ತಂದೆ ತಾಯಿ ಪ್ರೀತಿ ದೊರೆಯುವಂತಾಗಿದೆ ಎಂದು ನ್ಯಾಯಾಧೀಶ ರೋಣ ವಾಸುದೇವ ಅಭಿಪ್ರಾಯಪಟ್ಟರು.

ಸರ್ವೋಚ್ಚ ನ್ಯಾಯಾಲಯದ 3 ಪ್ರಕರಣ ಇತ್ಯರ್ಥ: ಸರ್ವೋಚ್ಚ ನ್ಯಾಯಾಲಯ ಸ್ಥಾಪನೆಯಾದ 75 ವರ್ಷಗಳ ಅಂಗವಾಗಿ ಜುಲೈ 29 ರಿಂದ ಆಗಸ್ಟ್ 03 ವರೆಗೆ ವಿಶೇಷ ಲೋಕ್ ಅದಾಲತ್ ಆಯೋಜಿಸಲಾಗಿತ್ತು. ಇದರಲ್ಲಿ ಸರ್ವೋಚ್ಚ ನ್ಯಾಯಾಲಯದ ಮುಂದಿರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲು ಕೈಗೆತ್ತಿಕೊಳ್ಳಲಾಗಿತ್ತು. ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ 22 ಪ್ರಕರಣಗಳನ್ನು ರಾಜಿ ಸಂಧಾನಕ್ಕಾಗಿ ಗುರುತಿಸಲಾಗಿತ್ತು. ಇದರಲ್ಲಿ 3 ಪ್ರಕರಣಗಳು ಇತ್ಯರ್ಥಗೊಂಡು ಸುಖಾಂತ್ಯ ಕಂಡಿವೆ. ಇದೊಂದು ದಾಖಲೆಯ ಮೈಲುಗಲ್ಲಾಗಿದೆ ಎಂದು ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.

**ಸೆಪ್ಟೆಂಬರ್ 14 ರಂದು ರಾಷ್ಟ್ರೀಯ ಲೋಕ ಅದಾಲತ್:** ಮುಂಬರುವ ಸೆಪ್ಟೆಂಬರ್ 14 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ಪಕ್ಷಗಾರರು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಲೋಕ ಅದಾಲತ್‍ನಲ್ಲಿ ವ್ಯಾಜ್ಯಪೂರ್ವ ಪ್ರಕರಣಗಳಾದ ಚೆಕ್ ಅಮಾನ್ಯ, ಬ್ಯಾಂಕ್ ವಸೂಲಾತಿ, ಉದ್ಯೋಗ, ಕಾರ್ಮಿಕ, ವೇತನ, ವಿದ್ಯುತ್, ನೀರು ಇತರೆ ಸೇವಾ ಶುಲ್ಕದ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಅವಕಾಶವಿದೆ. ಇದರರೊಂದಿಗೆ ನ್ಯಾಯಾಲಯದ ವ್ಯಾಜ್ಯದಲ್ಲಿರುವ ನಾನ್ ಕಾಂಪೌಡಬಲ್ ಹಾಗೂ ಗಂಭೀರ ತರದ ಅಪರಾಧಿಕ ಪ್ರಕರಣಗಳನ್ನು ಹೊರತು ಪಡಿಸಿ, ಇತರೆ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಬಹುದು. ಕಕ್ಷಿದಾರರು ನೇರವಾಗಿ ಅಥವಾ ವಕೀಲರ ಮೂಲಕ ಲೋಕ ಅದಾಲತ್‍ನಲ್ಲಿ ಭಾಗವಹಿಸಬಹುದು. ಸಾರ್ವಜನಿಕರು ಲೋಕ ಅದಾಲತ್ ಕುರಿತು ಹೆಚ್ಚಿನ ಪ್ರಶ್ನೆ ಮತ್ತು ಮಾಹಿತಿಗಾಗಿ ಬೇಕಾದಲ್ಲಿ ಇ–ಮೇಲ್ dlsachitradurga2@gmail.com ಹಾಗೂ ಸದಸ್ಯ ಕಾರ್ಯದರ್ಶಿಯವರ ಕಚೇರಿ ಮೊಬೈಲ್ ಸಂಖ್ಯೆ 9141193935 ಹಾಗೂ ದೂರವಾಣಿ ಸಂಖ್ಯೆ 08194– 222322 ಕ್ಕೆ ಸಹ ಸಂಪರ್ಕಿಸಬಹುದು ಎಂದು ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪೌಷ್ಠಿಕತೆ ಹೋಗಲಾಡಿಸಲು ಸ್ತನ್ಯ ಪಾನ ಮಾಡಿಸಿ

» **ಚಿತ್ರದುರ್ಗ**

ಅಪೌಷ್ಠಿಕತೆ ತೊಡೆದು ಹಾಕಲು ಮಗು ಜನಿಸಿದ ತಕ್ಷಣ ತಾಯಿಯ ಎದೆ ಹಾಲು ನೀಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಮೇಲ್ವಿಚಾರಕಿ ಹೆಚ್.ಎಸ್.ಮಂಜುಳ ಹೇಳಿದರು. ನಗರದ ಗುಮಾಸ್ತ ಕಾಲೋನಿಯಲ್ಲಿ ಗುರುವಾರ ನಡೆದ ಸ್ತನ್ಯಪಾನ ಸಪ್ತಾಹದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಂಗನವಾಡಿ ಕಾರ್ಯಕರ್ತೆಯರು ಸ್ಥಳೀಯವಾಗಿರುವ ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ಮತ್ತು ಸ್ತನ್ಯಪಾನದ ಬಗ್ಗೆ ಜಾಗೃತಿ ಮೂಡಿಸಬೇಕು. ತಾಯಿ ಹಾಲು ರೋಗ ನಿರೋಧಕ ಶಕ್ತಿಯನ್ನು ಹೊಂದಿರುತ್ತವೆ ಎಂದರು.ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆ ಮತ್ತು ಅಂಗನವಾಡಿ ಕಾರ್ಯಕರ್ತೆ ಹಾಗೂ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಆಗಸ್ಟ್ 10 ರಂದು ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಆಗಸ್ಟ್ 10 ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ತುರ್ತು ನಿರ್ವಹಣಾ ಕಾಮಗಾರಿ ನಿಮಿತ್ತ ಚಿತ್ರದುರ್ಗ ನಗರದ ಹಲವು ಪ್ರದೇಶಗಳಲ್ಲಿ ವಿದ್ಯುತ್ ಸರಬಾಜಿನಲ್ಲಿ ವ್ಯತ್ಯಯವಾಗಲಿದೆ. ನಗರದ ಕಾರ್ಯ ಮತ್ತು ಪಾಲನಾ ನಗರ ಉಪ–ವಿಭಾಗದ ವ್ಯಾಪ್ತಿಯಲ್ಲಿ ಎಫ್–1 ಮತ್ತು ಎಫ್–2, ಕೆಳಗೋಟೆ 11ಕೆವಿ ಮಾರ್ಗದ ಆರ್.ಟಿ.ಓ ಕಚೇರಿ ಸುತ್ತಮುತ್ತ, ಬಿ.ಎಲ್.ಬಡಾವಣೆ, ವಾಸವಿ ಮಹಲ್ ಸುತ್ತಮುತ್ತ, ಲಕ್ಷ್ಮೀ ಬಜಾರ್, ಬಿ.ಡಿ ರಸ್ತೆ, ದೊಡ್ಡಪೇಟೆ, ಚಿಕ್ಕಪೇಟೆ, ಎಸ್.ಆರ್.ಇ ಲೇಔಟ್, ಎಸ್.ಪಿ. ಕಚೇರಿ ಸುತ್ತಮುತ್ತ, ಕೆಳಗೋಟೆ ಪ್ರದೇಶ, ಮುನ್ಸಿಪಲ್ ಕಾಲೋನಿ, ಪೊಲೀಸ್ ಬಾರ್ ಲೈನ್ ರಸ್ತೆ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ನಿಲುಗಡೆ ಆಗಲಿದೆ. ಗ್ರಾಹಕರು ಸಹಕರಿಸಬೇಕೆಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ 2024ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರು ಸ್ವಯಂ ಸಂಸ್ಥೆಗಳಿಂದ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ ಕ್ರೀಡೆ ಮತ್ತು ಹಿರಿಯ ನಾಗರೀಕ ಕ್ಷೇತ್ರದಲ್ಲಿ ಸಮಾಜ ಸೇವೆಯಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಪ್ರಶಸ್ತಿಗಳು ಹಾಗೂ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸ್ವಯಂ ಸೇವಾ ಸಂಸ್ಥೆ ಸೇರಿದಂತೆ ಒಟ್ಟು 7 ಪ್ರಶಸ್ತಿಗಳನ್ನು ನೀಡಲಾಗುವುದು. ಆದ್ದರಿಂದ ಜಿಲ್ಲೆಯ ಅರ್ಹ ಹಿರಿಯ ನಾಗರಿಕರು ಹಾಗೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದು. ಜಿಲ್ಲಾ ಕಚೇರಿಯಿಂದ ಅರ್ಜಿಗಳನ್ನು ಪಡೆದು ನಿಗದಿತ ಅವಧಿಯೊಳಗೆ ಪೂರ್ಣ ವಿವರವನ್ನು ಕನ್ನಡದಲ್ಲಿಯೇ ಭರ್ತಿ ಮಾಡಿ, ಅರ್ಜಿ ನಮೂನೆ ಹಾಗೂ ಪ್ರಸ್ತಾವನೆಯನ್ನು ನಗರದ ಸ್ಟೇಡಿಯಂ ಹತ್ತಿರ, ಬಾಲಭವನ ಆವರಣದ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಕಚೇರಿಗೆ ಸಲ್ಲಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194–235284 ಗೆ ಸಂಪರ್ಕಿಸಲು ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ ಹೇಳಿಕೆ

# ತಾಯಿ ಹಾಲು ಅಮೃತಕ್ಕೆ ಸಮಾನ ಮಗು ಜನಿಸಿದ ತಕ್ಷಣ ತಾಯಿ ಹಾಲನ್ನು ನೀಡಿ

» **ಚಿತ್ರದುರ್ಗ**

ತಾಯಿ ಹಾಲು ಅಮೃತಕ್ಕೆ ಸಮಾನ ಮಗು ಜನಿಸಿದ ತಕ್ಷಣ ತಾಯಿ ಎದೆ ಹಾಲನ್ನು ನೀಡಬೇಕು. ಇದರಿಂದ ರೋಗ ನಿರೋಧಕ ಶಕ್ತಿಗಳು ಹೆಚ್ಚಾಗುತ್ತವೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ ಹೇಳಿದರು.

ನಗರದ ಸರ್ಕಾರಿ ಶಾಲೆ ಕೋಣನಹಟ್ಟಿಯಲ್ಲಿ ಗುರುವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ವತಿಯಿಂದ ಆಯೋಜಿಸಲಾದ ವಿಶ್ವ ಸ್ತನ್ಯ ಪಾನ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವ ಸ್ತನ್ಯ ಪಾನ ಸಪ್ತಾಹ ಘೋಷ ವಾಕ್ಯ "ಕೊರತೆಗಳನ್ನು



ಕೊನೆಗೊಳಿಸಿ ಸರ್ವರಿಗೂ ಸ್ತನ್ಯಪಾನದ ಬೆಂಬಲ ನೀಡಿ" ಎನ್ನುವ ಘೋಷ ವಾಕ್ಯದಂತೆ ಗರ್ಭಿಣಿ ಮತ್ತು ಬಾಣಂತಿಯರು ಹಾಗೂ ಮಕ್ಕಳ ತಾಯಂದಿರಿಗೆ ಎದೆಯ ಹಾಲಿನ ಮಹತ್ವವನ್ನು ತಿಳಿಸೋಣ ಎಂದರು.

ಕಾರ್ಯಕ್ರಮಕ್ಕೆ ಅತಿಥಿಯಾಗಿ ಆಗಮಿಸಿದ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳಾ.ವಿ ಮಾತನಾಡಿ, ಮಹಿಳೆಯರು ಸೌಂದರ್ಯ ಹಾಳಾಗುತ್ತದೆ ಎನ್ನುವ ಮೂಢ ನಂಬಿಕೆಯಿಂದ ಮಕ್ಕಳಿಗೆ ಹಾಲು ನೀಡುವುದು ಕಡಿಮೆಯಾಗುತ್ತಿದೆ. ತಾಯಿಯು ಮಕ್ಕಳಿಗೆ ಹಾಲನ್ನು ನೀಡುವುದರಿಂದ ತಾಯಿಯು ಸಹ ಆರೋಗ್ಯವಾಗಿರುತ್ತಾರೆ. ಆದ್ದರಿಂದ ಪ್ರತಿಯೊಬ್ಬ ಮಹಿಳೆಯರು ತಾಯಿಯಾಗಿ ಮಕ್ಕಳಿಗೆ ಹಾಲನ್ನು ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ದಾಸಪ್ಪ ಮಾತನಾಡಿ, ಮಕ್ಕಳ ಪೌಷ್ಠಿಕತೆ, ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಮಹಿಳಾ ಮೇಲ್ವಿಚಾರಕಿ ಪಾವನ, ಎಚ್.ಎಸ್.ಮಂಜುಳಾ, ಅಂಗನವಾಡಿ ಕಾರ್ಯಕರ್ತೆ, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ತಾಯಿಯ ಎದೆಹಾಲು ಅಮೃತಕ್ಕೆ ಸಮಾನ



» **ಚಿತ್ರದುರ್ಗ**

ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ ಎಂದು ಪೌಷ್ಟಿಕ ಮೇಲ್ವಿಚಾರಕರಾದ ಸಣ್ಣರಂಗಮ್ಮ ತಿಳಿಸಿದರು.

ಹಿರಿಯೂರು ತಾಲ್ಲೂಕಿನ ನಾಗನಾಯಕನಹಳ್ಳಿ ಅಂಗನ ವಾಡಿ ಕೇಂದ್ರದಲ್ಲಿ ಈಚೆಗೆ ನಡೆದ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತಾಯ್ತನದ ಸಂತೋಷ ಅನುಭವಿಸಲು ಕೂಸಿನೊಂದಿಗೆ ಬಾಂಧವ್ಯ ವೃದ್ಧಿಸಲು ತಾಯಂದಿರು ಮಗುವಿಗೆ ಎದೆ ಹಾಲು ಕುಡಿಸಬೇಕು. ತಾಯಿಯ ಎದೆಹಾಲನ್ನು ಅರ್ಧ ಗಂಟೆಯಿಂದ ಒಂದು ಗಂಟೆಯ ಒಳಗೆ ಪ್ರತಿಯೊಬ್ಬ ತಾಯಿಯು ತನ್ನ ಮಗುವಿಗೆ ಕೊಡಬೇಕು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆ, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮಸ್ಥರು ಇದ್ದರು.

## ಪ್ರಮುಖ ಸುದ್ದಿ

### ಉಚ್ಚ ನ್ಯಾಯಾಲಯಕ್ಕೆ ವರದಿ: ನ್ಯಾ. ರೋಣ ವಾಸುದೇವ

# ಅಂಗನವಾಡಿಗಳಲ್ಲಿ ಮೂಲಸೌಕರ್ಯದ ಕೊರತೆ

» **ಚಿತ್ರದುರ್ಗ**

ಜಿಲ್ಲೆಯ ಆಯ್ದ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ, ಅವುಗಳ ಸ್ಥಿತಿ–ಗತಿ ಅವಲೋಕಿಸಲಾಗಿದ್ದು, ಈ ಪೈಕಿ ಅನೇಕ ಅಂಗನವಾಡಿ ಕೇಂದ್ರಗಳಲ್ಲಿ ಮೂಲ ಸೌಕರ್ಯದ ಕೊರತೆ ಇರುವುದು ಕಂಡುಬಂದಿದೆ, ಈ ಬಗ್ಗೆ ಉಚ್ಚ ನ್ಯಾಯಾಲಯಕ್ಕೆ ವರದಿ ಸಲ್ಲಿಸುವುದಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಗುರುವಾರ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಜಿಲ್ಲೆಯಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಸ್ಥಿತಿ–ಗತಿ ಪರಿಶೀಲಿಸಲಾಗಿದ್ದು, ಜಿಲ್ಲೆಯಲ್ಲಿ ಬಹಳಷ್ಟು ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಮಕ್ಕಳಿಗೆ



ಆಟವಾಡಲು ಸರಿಯಾದ ಸ್ಥಳವಿಲ್ಲ. ಸೂಕ್ತ ಗಾಳಿ ಬೆಳಕು ಸಹ ಇಲ್ಲ. ಶೌಚಾಲಯ ಹಾಗೂ ಶುಚಿತ್ವದ ಕೊರತೆಯೂ ಕಂಡುಬಂದಿದೆ.ಇಂತಹದುಸ್ಥಿತಿಯಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗುವುದು. ಉಚ್ಚ ನ್ಯಾಯಾಲಯವು ಜಿಲ್ಲೆಯ ಎಲ್ಲಾ ಅಂಗನವಾಡಿಗಳಿಗೆ ಭೇಟಿ ನೀಡಿ ಕಟ್ಟಡ ಹಾಗೂ ಪೌಷ್ಠಿಕ ಆಹಾರ ವಿತರಣೆ ಬಗ್ಗೆ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಿತ್ತು. ಇದರಂತೆ 22 ಅಂಗನವಾಡಿ ಕೇಂದ್ರಗಳಿಗೆ ಕಾನೂನು ಸೇವಾ ಪ್ರಾಧಿಕಾರದಿಂದ ಭೇಟಿ ನೀಡಲಾಗಿದೆ. ಮುಂದೆಯೂ ನಿರಂತರವಾಗಿ ಭೇಟಿ ನೀಡಲಾಗುವುದು.

ಚಿತ್ರದುರ್ಗ ಜಿಲ್ಲೆಯಲ್ಲಿ 2,428 ಅಂಗನವಾಡಿ ಕೇಂದ್ರಗಳಿವೆ. ಭೇಟಿ ನೀಡಿದ ಅಂಗನವಾಡಿ ಕೇಂದ್ರಗಳಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಥಿತಿ ಗಂಭೀರವಾಗಿದ್ದು ಅಂಗನವಾಡಿ ನಡೆಸಲು ಯೋಗ್ಯವಿರುವುದಿಲ್ಲ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಬಾಡಿಗೆ ಕಟ್ಟಡಕ್ಕೆ ರೂ.4,000 ಅಂತಿಮ ದರ ನಿಗದಿ ಮಾಡಿದೆ. ಆದರೆ ನಗರ ಪ್ರದೇಶದಲ್ಲಿ ಈ ಬಾಡಿಗೆ ದರಕ್ಕೆ ಸುಸಜ್ಜಿತ ಕಟ್ಟಡ ದೊರಕುವುದು ಕಷ್ಟವಾಗಿದೆ ಎಂದು ನ್ಯಾಯಾಧೀಶ ರೋಣ ವಾಸುದೇವ ಅಭಿಪ್ರಾಯಪಟ್ಟರು.

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳು ಹಾಗೂ ಗರ್ಭಿಣಿಯರಿಗೆ ನೀಡುವ ಆಹಾರದಗುಣಮಟ್ಟಸಹಪರೀಕ್ಷಿಸಲಾಗಿದೆ. ಅನುದಾನಕೊರತೆಯುಅಂಗನವಾಡಿಗಳಲ್ಲಿ ಮೂಲಭೂತ ಸೌಕರ್ಯ ಕಡಿಮೆ ಆಗಲು ಕಾರಣವಾಗಿದೆ. ಇದರ ನಡುವೆಯು ಜಿಲ್ಲೆಯ ಕೆಲವು ಅಂಗನವಾಡಿ ಕೇಂದ್ರಗಳು ಬಹಳ ಒಳ್ಳೆಯ ಸ್ಥಿತಿಯಲ್ಲಿದ್ದು ಮಕ್ಕಳ ಸ್ನೇಹಿಯಾಗಿವೆ. ನ್ಯಾಯಧೀಶರು ಭೇಟಿ ನೀಡಿದ ನಂತರ ಅಂಗನವಾಡಿ ಕೇಂದ್ರಗಳ ಸ್ಥಿತಿ ಸುಧಾರಿಸಿದೆ ಎಂದರು.

ಸರ್ಕಾರ ರಾಜ್ಯದ ಕೆಲ ಅಂಗನವಾಡಿಗಳಲ್ಲಿ ಎಲ್.ಕೆ.ಜಿ ಹಾಗೂ ಯು.ಕೆ.ಜಿ ಆರಂಭಿಸಲಾಗುತ್ತಿದೆ. ಇದನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸುತ್ತಿದ್ದು, ಮುಂದೆ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಮುಂದುವರೆಸುವ ಚಿಂತನೆ ಇದೆ. ಆದರೆ ಅಂಗವಾಡಿಗಳ ಮೂಲಭೂತ ಸೌಕರ್ಯ ಬಲಪಡಿಸದೇ ಹೊರತು ಇಂತಹ ನವೀನ ಚಿಂತನೆಗಳ ಅನುಷ್ಠಾನ ಕಾರ್ಯಸಾಧುವಾಗುವುದಿಲ್ಲ. ಜಿಲ್ಲೆಯಲ್ಲಿ ಯಾವುದೇ ಅಂಗನವಾಡಿಗಳು ದುಸ್ಥಿತಿಯಲ್ಲಿದ್ದರೆ ತಕ್ಷಣವೇ ಕಾನೂನು ಸೇವಾ ಪ್ರಾಧಿಕಾರ ಗಮನಕ್ಕೆ ತರುವಂತೆ ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.ಹಿರಿಯ ಸಿವಿಲ್ ನ್ಯಾಯಧೀಶ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉಪಸ್ಥಿತರಿದ್ದರು.



ಚಿನ್ನದ ಬೆಲೆ
91.6 ಕೆಡಿಎಂ (ಗ್ರಾಂ) 5830
85 ಕೆಡಿಎಂ (ಗ್ರಾಂ) 5330



ಬೆಳ್ಳಿ ಬೆಲೆ
ಕೆಜಿ 67500



## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಕೋಡಿಹಳ್ಳಿ ಟಿ.ಶಿವಮೂರ್ತಿ ನೇಮಕ

» **ಚಳ್ಳಕೆರೆ**



ಕರ್ನಾಟಕ ರಾಜ್ಯ ದಲಿತ ಸಾಹಿತ್ಯ ಪರಿಷತ್‌ನ ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾ.ಅರ್ಜುನ್‌ಗೊಳಸಂಗಿ ಚಿತ್ರದುರ್ಗ ಜಿಲ್ಲಾ ದಲಿತ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷರನ್ನಾಗಿ ಚಳ್ಳಕೆರೆ ತಾಲ್ಲೂಕು ತಳಕು ಹೋಬಳಿಯ ಕೋಡಿಹಳ್ಳಿಯ ಟಿ.ಶಿವಮೂರ್ತಿಯವರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಜಿಲ್ಲಾಧ್ಯಕ್ಷರಾಗಿ ಟಿ.ಶಿವಮೂರ್ತಿ ದಲಿತ ಸಾಹಿತ್ಯ ಪರಿಷತ್‌ನ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವಂತೆ ಸೂಚನೆ ನೀಡಿದ್ದಾರೆ. ನೇಮಕಗೊಂಡ ಜಿಲ್ಲಾಧ್ಯಕ್ಷ ಟಿ.ಶಿವಮೂರ್ತಿ ದಲಿತ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷರಾಗಿ ಕಾರ್ಯನಿರ್ವಹಿಸಲು ಸಂತೋಷವಾಗುತ್ತಿದ್ದು ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕು ಘಟಕಗಳಲ್ಲಿ ಸಮಿತಿ ರಚಿಸಿ ಕಾರ್ಯಚಟುವಟಿಕೆಗಳನ್ನು ವಿಸ್ತರಿಸಲಾಗುವುದು ಎಂದಿದ್ದಾರೆ.

### ೯ಕ್ಕೆ ಕಾಯಿದೆ ಕುರಿತು ಜಾಗೃತಿ ಕಾರ್ಯಕ್ರಮ

» **ದಾವಣಗೆರೆ**

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಿ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ ದಾವಣಗೆರೆ, ಅಜೀಮ್ ಪ್ರೇಮ್‌ಜೀ ಫಿಲಾಂತ್ರಫಿಕ್ ಇನಿಷಿಯೇಟಿವ್ಸ್, ಆಕ್ಷನ್ ಇನ್ನಿಯೇಟಿವ್ ಫಾರ್ ಡೆವಲಪ್‌ಮೆಂಟ್ ದಾವಣಗೆರೆ ಇವರ ಸಂಯುಕ್ತ ಆಶ್ರಯದಲ್ಲಿ 9ಕ್ಕೆ ಇಂದಿರಾ ನಗರದ ಶ್ರೀಗಲ್ಲಿ ದುರುಗಮ್ಮ ದೇವಸ್ಥಾನದಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಆಗಸ್ಟ್ 9ರಂದು ಮಧ್ಯಾಹ್ನ 12ಕ್ಕೆ ನಡೆಯುವ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಶೈಕ್ಷಣಿಕ ಸಾಮಾಗ್ರಿಗಳ ವಿತರಣೆ ಹಾಗೂ ಮಕ್ಕಳ ಹಕ್ಕುಗಳು, ಬಾಲ್ಯ ವಿವಾಹ ನಿಷೇಧ ಕಾಯಿದೆ, ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿ ನಿಷೇಧ ಕಾಯಿದೆ ಕುರಿತು ಜಾಗೃತಿ ಮೂಡಿಸಲಾಗುವುದು. ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಿದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣನವರ ಉದ್ಘಾಟಿಸಲಿದ್ದು, ಎಐಡಿ ಸಂಸ್ಥೆಯ ಕಾರ್ಯದರ್ಶಿ ಡಿ.ಎಸ್.ಬಾಬಣ್ಣ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್, ಕಾರ್ಮಿಕ ನಿರೀಕ್ಷಕ ರಾಜಶೇಖರ್ ಹಿರೇಮಠ, ಶಿಕ್ಷಕ ಪರಮೇಶ್ವರಪ್ಪ, ನರೇಂದ್ರ ಆಗಮಿಸಲಿದ್ದಾರೆ.

### ಪತ್ರಿಕಾ ವರದಿ ಫಲಶ್ರುತಿ : ಗಂಜಿಗುಂಟೆ ಗ್ರಾಮದ ಸರ್ಕಾರಿ ಗೋಮಾಳ ಒತ್ತುವರಿದಾರರಿಗೆ ಮೌಖಿಕ ಸೂಚನೆ : ಇಒ ಶಶಿಧರ

» **ಚಳ್ಳಕೆರೆ**

ತಾಲ್ಲೂಕಿನ ಗಂಜಿಕುಂಟೆ ಗ್ರಾಮದ ಸುಮಾರು 100ಕ್ಕೂ ಹೆಚ್ಚು ಹರಿಜನ ಕುಟುಂಬಗಳಿಗೆ ವಾಸಿಸಲು ನಿವೇಶನ ಇಲ್ಲದ ಕಾರಣ ಸರ್ಕಾರಿ ಗೋಮಾಳದಲ್ಲೇ ನಿವೇಶನಗಳ ಹಂಚಿಕೆಯಾಗಬೇಕಿದ್ದು, ಪ್ರಸ್ತುತ ಸದರಿ ಗೋಮಾಳವನ್ನು ಅಕ್ರಮಿಸಿಕೊ0ಡಿರುವುದರಿಂದ ಹರಿಜನ ಕುಟುಂಬಗಳಿಗೆ ನಿವೇಶನಗಳ ಸೌಲಭ್ಯವಿಲ್ಲವಾಗಿದ್ದು, ಈ ಬಗ್ಗೆ ಪ್ರತಿಭಟನೆ ನಿರತ ನಿವೇಶನ ರಹಿತರನ್ನು ಭೇಟಿ ಮಾಡಿ ಚರ್ಚಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸಮಸ್ಯೆಯನ್ನು ಬಗೆಹರಿಸುವ ಭರವಸೆ ನೀಡಿದ್ದರು. ಗಂಜಿಗುಂಟೆ ಗ್ರಾಮದ ನಿವೇಶನ ರಹಿತರು ಆಶ್ರಯಯೋಜನೆಯ ನಿವೇಶನಗಳನ್ನು ವಿಂಗಡಿಸಿ, ಹಕ್ಕು ಪತ್ರ ನೀಡುವವರೆಗೂ ಪ್ರತಿಭಟನೆ ನಡೆಸುವುದಾಗಿ ತಾಲ್ಲೂಕು ಕಚೇರಿ ಮುಂದೆ ಕಳೆದ ಎರಡು ದಿನಗಳಿಂದ ಧರಣಿ ನಡೆಸುತ್ತಿದ್ದು, ತಹಶೀಲ್ದಾರ್ ಮತ್ತು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ನೀಡಿದ ಭರವಸೆಯ ನಡುವೆಯೂ ಮುಷ್ಕರ ಮುಂದುವರೆಸಿದ್ದರು. ನಿವೇಶನ ರಹಿತ ಮುಷ್ಕರದ ಹಿನ್ನೆಲೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ತಾಲ್ಲೂಕು ಭೂಮಾಪನ ಅಧಿಕಾರಿ ಬಾಬು, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಪಿಡಿಒ ಶಿವಣ್ಣ ಮುಂತಾದವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ಈ ಬಗ್ಗೆ ಮಾಹಿತಿ ನೀಡಿ,ಸುಮಾರು 5 ಎಕರೆ ಪ್ರದೇಶದ ಈ ಗೋಮಾಳವನ್ನು ತಾಲ್ಲೂಕು ಪಂಚಾಯಿತಿಗೆ ವರ್ಗಾವಣೆ ಮಾಡಲಾಗಿದೆ. ನಿವೇಶನ ರಹಿತರಿಗೆ ನಿವೇಶನ ವಿಂಗಡಿಸುವ ನಿಟ್ಟಿನಲ್ಲಿ ಸರ್ವೆ ಇಲಾಖೆ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಅಳತೆ ಮಾಡಿಸಿ ಈಗಾಗಲೇ ಅಲ್ಲಿ ವಾಸವಿರುವ ಎಲ್ಲರಿಗೂ ನಿವೇಶನವನ್ನು ಹಂಚಲು ಅಲ್ಲಿನ ಒತ್ತುವರಿಯನ್ನು ತೆರವು ಮಾಡಬೇಕಿದೆ. ಈ ಬಗ್ಗೆ ಒತ್ತುವರಿ ಮಾಡಿಕೊಂಡ ವ್ಯಕ್ತಿಗಳಿಗೆ ಮೌಖಿಕವಾಗಿ ನಿರ್ದೇಶನ ನೀಡಲಾಗಿದೆ. ಸದರಿ ಗೋಮಾಳದ ಪ್ರದೇಶ ತಾಲ್ಲೂಕು ಪಂಚಾಯಿತಿ ಅಧೀನದಲ್ಲಿದ್ದು, ದಾಖಲಾತಿಗಳ ಪ್ರಕಾರ ಈ ಅಲ್ಲಿರುವ ಜಮೀನನ್ನು ಪೂರ್ಣವಾಗಿ ಅಳತೆ ಮಾಡಿ ಗುರುತು ಹಾಕಲಾಗಿದೆ. ಅನಗತ್ಯವಾಗಿ ಯಾರಾದರೂ ಅಕ್ರಮಿಸಿದರೆ ತೆರವುಗೊಳಿಸಲಾಗುವುದು ಎಂದು ತಿಳಿಸಿದರು.

"ತೋಟಗಾರಿಕೆ ದಿನಾಚರಣೆ" ಕಾರ್ಯಕ್ರಮದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಭಿಪ್ರಾಯ

# ಪರಿಶ್ರಮದಿಂದ ಕೃಷಿ ಹೆಚ್ಚು ಲಾಭದಾಯಕ

» **ಚಿತ್ರದುರ್ಗ**





ಹೆಚ್ಚಿನ ಪರಿಶ್ರಮ ಪಟ್ಟರೆ ಕೃಷಿ ಹಾಗೂ ತೋಟಗಾರಿಕೆಯನ್ನು ಲಾಭದಾಯಕವಾಗಿಸ ಬಹುದಾಗಿದ್ದು, ನೌಕರಿಗಿಂತಲೂ ಹೆಚ್ಚು ಆದಾಯ ಗಳಿಕೆ ಮಾಡಲು ಸಾಧ್ಯವಿದೆ. ಜತೆಗೆ ಇದೊಂದು ದೇಶಸೇವೆಯೂ ಆಗಲಿದೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ತೋಟಗಾರಿಕೆ ಇಲಾಖೆ ಸಭಾಂಗಣದಲ್ಲಿ ಗುರುವಾರ ತೋಟಗಾರಿಕೆ ಇಲಾಖೆ ವತಿಯಿಂದ ತೋಟಗಾರಿಕೆ ಪಿತಾಮಹಾ ದಿ.ಡಾ.ಎಂ.ಹೆಚ್.ಮರಿಗೌಡರ ಜನ್ಮದಿನದ ಅಂಗವಾಗಿ ತೋಟಗಾರಿಕೆ ದಿನಾಚರಣೆ ಹಾಗೂ 2024-25ನೇ ಸಾಲಿನ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ತೋಟಗಾರಿಕೆ ವಿಸ್ತರಣೆ ಮತ್ತು ತರಬೇತಿ ಕಾರ್ಯಕ್ರಮದಡಿ ಶಾಲಾ ಮಕ್ಕಳಿಗೆ ತೋಟಗಾರಿಕೆ ಬಗ್ಗೆ ಏರ್ಪಡಿಸಿದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ವಿದ್ಯಾರ್ಥಿಗಳಿಗೆ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳು ಹಾಗೂ ರೈತರ ಶ್ರಮದ ಬಗ್ಗೆ ಮಾಹಿತಿಯ ಕೊರತೆ ಇದೆ. ನಾವು ತಿನ್ನುವ ಆಹಾರ, ಹಣ್ಣು, ತರಕಾರಿ ಬೆಳೆಗಳನ್ನು ಯಾವ ರೀತಿಯಾಗಿ ಬೆಳೆಯುತ್ತಿದ್ದೇವೆ ಎಂಬುವುದರ ಕುರಿತು ವಿದ್ಯಾರ್ಥಿಗಳಿಗೆ ಪ್ರಾಥಮಿಕ ಜ್ಞಾನ ಅತ್ಯವಶ್ಯಕವಾಗಿ ಬೇಕಾಗಿದೆ. ಈ ಹಿನ್ನಲೆಯಲ್ಲಿಶಾಲಾಮಕ್ಕಳಿಗೆತೋಟಗಾರಿಕೆ ಬಗ್ಗೆ ತರಬೇತಿ ನೀಡಲಾಗುತ್ತಿದ್ದು, ಇದು ವಿದ್ಯಾರ್ಥಿಗಳಿಗೆ ಅತ್ಯಗತ್ಯವಾಗಿದೆ. ಹೆಚ್ಚಿನ ಗಮನಹರಿಸಿ ತರಬೇತಿ ಕಾರ್ಯಕ್ರಮದ ಸದುಪಯೋಗವನ್ನು ವಿದ್ಯಾರ್ಥಿಗಳು ಸದ್ಬಳಕೆ ಮಾಡಿಕೊಳ್ಳಬೇಕು. ತೋಟಗಾರಿಕೆ ಬಗ್ಗೆ ತರಬೇತಿ ಪಡೆಯುವ ಮೂಲಕ ತಮಗೆ ಬೇಕಾಗಿರುವ ಹಣ್ಣು, ತರಕಾರಿಗಳನ್ನು ತಾವೇ ಬೆಳೆದುಕೊಳ್ಳಲು ಮುಂದಾಗಬೇಕು ಎಂದರು.ತೋಟಗಾರಿಕೆ ಪಿತಾಮಹಾ ದಿ.ಡಾ.ಎಂ.ಹೆಚ್.ಮರಿಗೌಡರು ತೋಟಗಾರಿಕೆ ಅಭಿವೃದ್ಧಿಗೆ ಅಪಾರವಾದ ಕೊಡುಗೆ ನೀಡಿದ್ದಾರೆ. ಸಾಧನೆ ಮಾಡಿರುವ ಸಾಧಕರನ್ನು ಆದರ್ಶವಾಗಿಟ್ಟುಕೊಂಡು ತಾವುಗಳು ಸಹ ಸಮಾಜಕ್ಕೆ ಉತ್ತಮವಾದ ಕೊಡುಗೆಯನ್ನು ನೀಡುವಂತಾಗಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶರಣಪ್ಪ ಭೋಗಿ ಮಾತನಾಡಿ, ತೋಟಗಾರಿಕೆ ಪಿತಾಮಹಾ ಡಾ.ಎಂ.ಹೆಚ್.ಮರಿಗೌಡರ ಜನ್ಮ ದಿನಾಚರಣೆ ಅಂಗವಾಗಿ ತೋಟಗಾರಿಕ ದಿನ ಆಚರಣೆ ಮಾಡಲಾಗುತ್ತಿದೆ. ತೋಟಗಾರಿಕೆ ದಿನದ ಅಂಗಗಾಗಿ ಶಾಲಾ ಮಕ್ಕಳಿಗೆ ಕಿಚನ್ ಗಾರ್ಡನ್ ಮಾಡುವ ಬಗೆ, ಮನೆಯ ಅಕ್ಕಪಕ್ಕ ಹಣ್ಣಿನ ಗಿಡಗಳನ್ನು ಬೆಳೆಯುವ ಪದ್ಧತಿ ಬಗ್ಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿ ನಂತರ ಶಾಲಾ ಮಕ್ಕಳಿಗೆ ವಿವಿಧ ಬಗೆಯ ತರಕಾರಿ ಬೆಳೆಗಳ ಬೀಜದ ಕಿಟ್‌ನ್ನು ವಿತರಣೆ ಮಾಡಲಾಗುವುದು ಎಂದರು.

ಮಾರುಕಟ್ಟೆಯಲ್ಲಿ ಸಿಗುವ ಹಣ್ಣು, ತರಕಾರಿಗಳುಸಾಕಷ್ಟುರಾಸಾಯನಿಕಗಳಿಂದ ಕೂಡಿದ್ದು, ಕೆಲವು ರಾಸಾಯನಿಕಗಳು ಆರೋಗ್ಯಕ್ಕೆ ಹಾನಿಕಾರಕವಾಗಿವೆ. ಹಾಗಾಗಿ ನಮ್ಮ ಮನೆಗೆ ಬೇಕಾದ ಹಣ್ಣು, ತರಕಾರಿಗಳನ್ನು ಬೆಳೆದು ಜನರು ಉತ್ತಮ ಆರೋಗ್ಯ, ಪೌಷ್ಠಿಕ ವೃದ್ಧಿ ಮಾಡುವ ಉದ್ದೇಶದಿಂದ ಶಾಲಾ ಮಕ್ಕಳಿಗೆ ತರಬೇತಿ ನೀಡಲಾಗುತ್ತಿದೆ ಎಂದರು.ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ದೇವರಾಜ್ ಪ್ರಾಸ್ತಾವಿಕವಾಗಿ ಮಾತನಾಡಿ ಡಾ.ಎಂ.ಹೆಚ್.ಮರಿಗೌಡರ ಸಾಧನೆ ಕುರಿತು ಸವಿವರವಾಗಿ ಮಾಹಿತಿ ನೀಡಿದರು.ಇದೇ ಸಂದರ್ಭದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ತರಕಾರಿ, ಹಣ್ಣು ಬೀಜಗಳ ಕಿಟ್‌ನ್ನು ವಿದ್ಯಾರ್ಥಿಗಳಿಗೆ ವಿತರಿಸಿದರು. ನಂತರ ತೋಟಗಾರಿಕೆ ಆವರಣದಲ್ಲಿ ಗಿಡನೆಟ್ಟು ನೀರೆರೆದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಎಸ್.ಜೆ.ಸೋಮಶೇಖರ್, ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ನಗರಸಭೆ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ, ನಗರಸಭೆ ಸದಸ್ಯ ವೆಂಕಟೇಶ್, ಕೆಡಿಪಿ ಸದಸ್ಯ ನಾಗರಾಜ್ ಸೇರಿದಂತೆ ತೋಟಗಾರಿಕೆ ಇಲಾಖೆ ಸಿಬ್ಬಂದಿ ಹಾಗೂ ಶಾಲಾ ವಿದ್ಯಾರ್ಥಿಗಳು ಇದ್ದರು.



ಬಿಜೆಪಿ.ಯ ಮೈಸೂರು ಚಲೋ ಪಾದಯಾತ್ರೆಗೆ ಹೊರಟ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪನವರ ಅಭಿಮಾನಿಗಳು ಹಾಗೂ ಬಿಜೆಪಿ. ಕಾರ್ಯಕರ್ತರು.

## ಸಹಯೋಗ ಶಿಕ್ಷಕರ ತರಬೇತಿ ಶಿಬಿರದ ಸಮಾರೋಪ

» **ಚಿತ್ರದುರ್ಗ**



ಪ್ರತಿಯೊಬ್ಬರ ಜೀವನದಲ್ಲಿ ಬೆಳಗಿನಿಂದ ರಾತ್ರಿವರೆಗೂ ನಡೆಯುವ ಕಾರ್ಯಗಳು ಯೋಗಮಯ ವಾಗಿರಬೇಕೆಂದು ಅಂತರಾಷ್ಟ್ರೀಯ ಯೋಗ ಗುರು ರಾಜ್ಯ ಪ್ರಭಾರಿ ಭವರ್‌ಲಾಲ್ ಆರ್ಯ ತಿಳಿಸಿದರು.

ಪತಂಜಲಿ ಯೋಗ ಪೀಠ ಹರಿದ್ವಾರದ ಮಾರ್ಗದರ್ಶನದಲ್ಲಿ ಪತಂಜಲಿ ಯೋಗ ಸಮಿತಿ ಮತ್ತು ಭಾರತ ಸ್ವಾಭಿಮಾನಿ ಟ್ರಸ್ಟ್ ವತಿಯಿಂದ ವಾಸವಿ ಶಾಲೆಯಲ್ಲಿ ಆಯೋಜಿಸಲಾಗಿದ್ದ ಸಹಯೋಗ ಶಿಕ್ಷಕರ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಸರ್ಟಿಫಿಕೇಟ್‌ಗಳನ್ನು ವಿತರಿಸಿ ಮಾತನಾಡಿದರು.ಯೋಗದಿಂದ ಎಲ್ಲಾ ತರಹದ ನೋವು, ರೋಗಗಳು ನಿವಾರಣೆಯಾಗಿ ಮನಸ್ಸು ಸಮಾಧಾನದಿಂದ ಇರುತ್ತದೆ. ರಾಜ್ಯದ 31 ಜಿಲ್ಲೆಗಳಲ್ಲಿ ಯೋಗ ಶಿಕ್ಷಕರ ತರಬೇತಿ ನಡೆಸಿ ಮಾನಸಿಕ ಮತ್ತು ದೈಹಿಕಾಗಿ ಖುಷಿ ನೀಡುವುದು ನಮ್ಮ ಸಂಕಲ್ಪ. ಜೀವನದಲ್ಲಿ ಯೋಗ ಇಲ್ಲದಿದ್ದರೆ ತೃಪ್ತಿ ಸಿಗುವುದಿಲ್ಲ. ಆದ್ದರಿಂದ ಪ್ರತಿಯೊಬ್ಬರು ದಿನಕ್ಕೆ ಒಂದು ಗಂಟೆಯಾದರೂ ಯೋಗ ಮಾಡಿ ರೋಗದಿಂದ ದೂರವಿರಿ ಎಂದು ಹೇಳಿದರು.ಯೋಗ ನಿದ್ರೆ ದೇಹವನ್ನು ಸಂಪೂ ರ್ಣವಾಗಿ ಹಗುರಗೊಳಿಸುತ್ತದೆ. ಶಿಕ್ಷಣದ ಜೊತೆ ಯೋಗ ಮಕ್ಕಳಿಗೆ ಮುಖ್ಯ ಪಾಠವಾಗಬೇಕು. ಯೋಗದಿಂದ ಸೊಂಟ, ಮೊಣಕಾಲು ನೋವು ನಿವಾರಣೆಯಾಗುತ್ತದೆ. ನನ್ನ ಫೇಸ್‌ಬುಕ್, ಯ್ಯೂಟೂಬ್ ಲೈವ್ ನೋಡಿ ಯೋಗಾಭ್ಯಾಸ ಕಲಿಯಬಹುದು ಎಂದರು.

ಭುಜಂಗಾಸನ, ಅರ್ಧ ಚಂದ್ರಾಸನ, ಮಕರಾಸನ, ಮರ್ಕ ಟಾಸನ ಹೀಗೆ ನಾನಾ ಭಂಗಿಯ ಯೋಗಾಭ್ಯಾಸ ಮಾಡಿಸಿದರು.

ಭಾರತ ಸ್ವಾಭಿಮಾನಿ ಟ್ರಸ್ಟ್ ಅಧ್ಯಕ್ಷ ದೇವಾನಂದನಾಯ್ಕ, ವಾಸವಿ ವಿದ್ಯಾಸಂಸ್ಥೆ ಅಧ್ಯಕ್ಷ ಸತ್ಯನಾರಾಯಣಶೆಟ್ಟಿ, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಪತಂಜಲಿ ಯೋಗ ಸಮಿತಿ ಕಾರ್ಯದರ್ಶಿ ಗುರುಮೂರ್ತಿ, ಉಪಾಧ್ಯಕ್ಷೆ ಶ್ರೀಮತಿ ಲಲಿತಾಬೇದ್ರೆ, ಯುವ ಪ್ರಭಾರಿ ನವೀನ, ಕಿಸಾನ್ ಸೇವಾ ಸಮಿತಿಯ ಕೆಂಚವೀರಪ್ಪ, ಕಾರ್ಯಾಲಯ ಪ್ರಭಾರಿ ರಾಮನರೇಶ್, ಸಹ ಕಾರ್ಯದರ್ಶಿ ಕೃಷ್ಣಮೂರ್ತಿ ವೇದಿಕೆಯಲ್ಲಿದ್ದರು.

## ಶಾಸಕರ ನಡೆ ಹಳ್ಳಿಗಳ ಅಭಿವೃದ್ಧಿ ಕಡೆ: ಶಾಸಕ ಬಸವರಾಜು ಸ್ಪಂದನೆ



» **ಚನ್ನಗಿರಿ**

ಶಾಸಕರ ನಡೆ ಹಳ್ಳಿಗಳ ಅಭಿವೃದ್ಧಿ ಕಡೆ ಕಾರ್ಯಕ್ರಮದ ಮೂಲಕ ಎಂಬ ತಾಲ್ಲೂಕಿನ ಕೆಂಪನಹಳ್ಳಿಗ್ರಾಪಂ ಮತ್ತು ದೊಡ್ಡಮಲ್ಲಾಪುರ ಗ್ರಾಪಂ ವ್ಯಾಪ್ತಿಯ ಗ್ರಾಮಗಳಿಗೆ ಶಾಸಕರಾದ ಬಸವರಾಜು ವಿ ಶಿವಗಂಗಾ ತೆರಳಿ ಜನರ ಸಮಸ್ಯೆ ಆಲಿಸಿದರು. ಈ ವೇಳೆ ಮಾತನಾಡಿದ ಅವರು , ಮಳೆಯಿಂದಾಗಿ ಹಲವು ಗ್ರಾಮಗಳಲ್ಲಿ ಮನೆಗಳು ಹಾನಿಗೊಳಗಾಗಿವೆ. ಅವುಗಳಿಗೆ ಪರಿಹಾರ, ಹೊಸ ಮನೆ ಮಂಜೂರು ಸೇರಿದಂತೆ ಮನೆ ಇಲ್ಲದವರನ್ನು ಪಟ್ಟಿಮಾಡಿ ಮಾಡುವಂತೆ ಆಯಾ ಗ್ರಾಪಂಗಳ ಪಿಡಿಒಗಳಿಗೆ ಸೂಚನೆ ನೀಡಲಾಗಿದೆ. ಕ್ಷೇತ್ರಾದ್ಯಂತ ಸಾಕಷ್ಟು ನಿವೇಶನಗಳಬೇಡಿಕೆ ಕೇಳಿ ಬರುತ್ತಿದ್ದು ಮುಂದಿನ ದಿನಗಳಲ್ಲಿ ಪರಿಹಾರ ಕಲ್ಪಿಸಲು ಕ್ರಮವಹಿಸಲಾಗುವುದು ಎಂದರು. ಗ್ರಾಮಗಳಲ್ಲಿ ಹಾಳಾಗಿರುವ ಬಾಕ್ಸ್ ಚರಂಡಿಗಳ ನಿರ್ಮಾಣ, ಸಿಸಿ ರಸ್ತೆಅಭಿವೃದ್ಧಿ, ಶಾಲಾ ಕಾಂಪೌ0ಡ್ ನಿರ್ಮಾಣಕ್ಕೆ ಅಂದಾಜು ಪಟ್ಟಿ ತಯಾ ಚನ್ನಗಿರಿ ಕ್ಷೇತ್ರದ ಶಾಸಕ ಬಸವರಾಜ್ ವಿ ಶಿವಗಂಗಾ ತಿಳಿಸಿದರು. ಕೆಂಪನಹಳ್ಳಿ, ದೊಡ್ಡಮಲ್ಲಾಪುರದಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಸಾಮಾಜಿಕ ಭದ್ರತೆಗಳಾದ ಗೃಹಲಕ್ಷ್ಮೀ ಯೋಜನೆ, ವಿಧವಾ ಹಾಗೂ ವೃದ್ಧಾಪ್ಯ ವೇತನಗಳು ತಾಂತ್ರಿಕ ತೊಂದರೆಯಿಂದಾಗಿ ಸಮಸ್ಯೆಯಾಗಿದ್ದು ಎಲ್ಲಾ ಸಮಸ್ಯೆಗಳನ್ನು ಪರಿಹಾರಿಸುವುದಾಗಿ ತಿಳಿಸಿದರು. ಹಣ ಖಾತೆಗೆ ಬರದೇ ಇರುವ ಫಲಾನುಭವಿಗಳು ಕೂಡಲೇ ಇಕೆವೈಸಿ ಮಾಡಿಸುವಂತೆ ಸೂಚನೆ ನೀಡಿದರು. ಜಮೀನು ವಿವಾದಗಳನ್ನು ಸ್ಥಳದಲ್ಲೇ ಪರಿಹಾರ ಕಲ್ಪಿಸಿದರು. ಸಂತೆಬೆನ್ನೂರು ಬೆಸ್ಕಾಂ ಶಾಖಾಧಿಕಾರಿ ಮೋಹನ್, ಪಿಆರ್‌ಇಡಿ ಇಲಾಖೆಯ ಎಇ, ಎಂಜಿನಿಯರ್ ವಿದ್ಯಾಭೂಷಣ್, ಕೆಆರ್‌ಐಡಿ ಇಲಾಖೆ ಮಹೇಶ್, ನಿರ್ಮಿತಿ ಕೇಂದ್ರ ಗಿರೀಶ್, ಗ್ರಾಮಲೆಕ್ಕಾಧಿಕಾರಿ ಭಾರತಿ, ಕೆಂಪನಹಳ್ಳಿ ಗ್ರಾಪಂ ಅಧ್ಯಕ್ಷ ಟಿ ವೀರಪ್ಪ, ಆಲೂರು ಗ್ರಾಪಂ ಅಧ್ಯಕ್ಷ ಸೈಮುಲ್ಲಸಾಬ್ ಆಲೂರು, ವೈಎಲ್ ಲಾವಣ್ಯ, ಪಿಡಿಒ ರಂಗಸ್ವಾಮಿ, ಗ್ರಾಪಂ ಸದಸ್ಯರು ಮತ್ತುವೆಂಕಟೇಶ್ವರಕ್ಯಾಂಪು, ಈರಗನಹಳ್ಳಿ, ದೊಡ್ಡಮಲ್ಲಾಪುರ, ಆಲೂರು ಗ್ರಾಮಸ್ಥರು, ಮುಖಂಡರು ಇದ್ದರು.

**ಪ್ರಮುಖ ಸುದ್ದಿ**

# ಬಿಜೆಪಿ-ಜೆಡಿಎಸ್ ಹಗರಣಗಳ ಪೋಸ್ಟರ್ ಪ್ರದರ್ಶನ

» **ಚಿತ್ರದುರ್ಗ**



ಬಡವರ ಭಾಗ್ಯದಾತ, ಅಹಿಂದಾ ನಾಯಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಜನತೆಗೆ ನೀಡಿರುವ ಐದು ಉಚಿತ ಗ್ಯಾರೆಂಟಿಗಳನ್ನು ಸಹಿಸಿಕೊಳ್ಳಲು ಆಗದೆ ಬಿಜೆಪಿ. ಮತ್ತು ಜೆಡಿಎಸ್.ನವರು ಇಲ್ಲಸಲ್ಲದ ಆರೋಪ ಹೊರಿಸಿ ಬೆಂಗಳೂರಿನಿಂದ ಮೈಸೂರು ಚಲೋ ಪಾದಯಾತ್ರೆ ಹೊರಟಿರುವುದರಲ್ಲಿ ಹುರುಳಿಲ್ಲ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ಗೀತಾನಂದಿನಿಗೌಡ ತಿರುಗೇಟು ನೀಡಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿ ಎದುರು ಗುರುವಾರ ಬಿಜೆಪಿ. ಮತ್ತು ಜೆಡಿಎಸ್. ಅಧಿಕಾರದಲ್ಲಿದ್ದಾಗ ನಡೆದಿರುವ ಹಗರಣಗಳ ಪೋಸ್ಟರ್‌ಗಳನ್ನು ಪ್ರದರ್ಶಿಸಿ ಮಾತನಾಡಿದರು.ಮುಡಾ ಹಗರಣ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪಾತ್ರವಿಲ್ಲದಿದ್ದರೂ ರಾಜೀನಾಮೆ ನೀಡಬೇಕೆಂದು ಕೇಳುವ ನೈತಿಕತೆ ಬಿಜೆಪಿ. ಜೆಡಿಎಸ್.ನವರಿಗಿಲ್ಲ. ಪಾಪ ವಿಮೋಚನೆ ಮಾಡಿಕೊಳ್ಳಲು ಬೂಟಾಟಿಕೆ ಪಾದಯಾತ್ರೆ ನಡೆಸುತ್ತಿದ್ದಾರೆ. ಶೋಷಿತ ಸಮುದಾಯ, ಹಿಂದುಳಿದವರು, ದಲಿತರು, ಅಲ್ಪಸಂಖ್ಯಾತರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬೆಂಬಲವಾಗಿದ್ದಾರೆಂದು ಹೇಳಿದರು.

ಸಂವಿಧಾನವನ್ನು ಬುಡಮೇಲು ಗೊಳಿಸಲು ಹೊರಟಿರುವ ಬಿಜೆಪಿ. ಮತ್ತು ಜೆಡಿಎಸ್.ನವರು ಮೊದಲು ತಮ್ಮ ತಮ್ಮ ಅಧಿಕಾರವಧಿಯಲ್ಲಿ ನಡೆಸಿರುವ ಹಗರಣಗಳ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಲಿ. ಅದನ್ನು ಬಿಟ್ಟು ಮುಖ್ಯಮಂತ್ರಿ ಸಿದ್ದರಾಮಯ್ಯನವರ ತಲೆದಂಡಕ್ಕೆಪಾದಯಾತ್ರೆನಡೆಸುತ್ತಿರುವುದು ಯಾವ ಪುರಷಾರ್ಥಕ್ಕೆ ಎಂದು ಖಾರವಾಗಿ ಪ್ರಶ್ನಿಸಿದರು.ಬಿಜೆಪಿ. ಅಧಿಕಾರವಧಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯಾಗಿದ್ದ ಶಶಿಕಲಾ ಜೊಲ್ಲೆ ಮಕ್ಕಳ ಮೊಟ್ಟೆಯಲ್ಲಿ ಕಮೀಷನ್ ಹೊಡೆದಿದ್ದು, ಆರ್.ಅಶೋಕ್ ಬಗರ್‌ಹುಕುಂ, ಆಶ್ರಯ ಯೋಜನೆಗಳಡಿ ಅಧಿಕಾರಿಗಳಿಂದ ಲಂಚ ಪಡೆದಿದ್ದು, ಬಿ.ಸಿ.ಪಾಟೀಲ್ ಕೃಷಿ ಸಚಿವರಾಗಿದ್ದಾಗ ನಡೆದ ಹಗರಣಗಳ ತನಿಖೆಯಾಗಲಿ. ಅದನ್ನು ಬಿಟ್ಟು ಯಾವುದೇ ಕಪ್ಪುಚುಕ್ಕೆಯಿಲ್ಲದೆ ರಾಜ್ಯವನ್ನು ಮುನ್ನಡೆಸಿಕೊಂಡು ಹೋಗುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ವಿನಾ ಕಾರಣ ಗೂಬೆ ಕೂರಿಸುವ ಪಿತೂರಿ ನಡೆಸಿದರೆ ಪರಿಣಾಮ ನೆಟ್ಟಗಿರುವುದಿಲ್ಲ. ನಾವುಗಳು ಜನಾಂದೋಲನ ಮೂಲಕ ಹಗರಣಗಳ ಸರಮಾಲೆಯನ್ನು ರಾಜ್ಯದ ಜನತೆ ಮುಂದಿಡುತ್ತೇವೆಂದು ವಿರೋಧಿಗಳಿಗೆ ಎಚ್ಚರಿಸಿದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷೆ ನಜ್ಮತಾಜ್, ಮಹಿಳಾ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಪಿ.ಕೆ.ಮೀನಾಕ್ಷಿ, ಆಶ್ರಯ ಕಮಿಟಿ ಸದಸ್ಯೆ ಮುನಿರಾ ಎ.ಮಕಾಂದಾರ್, ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಮೋಕ್ಷರುದ್ರಸ್ವಾಮಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷೆ ಭಾಗ್ಯಮ್ಮ, ಚಂದನ, ಶ್ವೇತ ಈ ಸಂದರ್ಭದಲ್ಲಿದ್ದರು.

## ಫಾಸ್ಟ್ ನ್ಯೂಸ್

### ಟೇಕ್ವಾಂಡೋ: ಡಾನ್‌ಬೋಸ್ಕೋ ಶಾಲೆಗೆ ಪದಕ



» **ಚಿತ್ರದುರ್ಗ**

ಬೆಂಗಳೂರು ಕೋರಮಂಗಲ ಸ್ಟೇಡಿಯಂನಲ್ಲಿ ನಡೆದ 41 ನೇ ರಾಜ್ಯ ಮಟ್ಟದ ಟೇಕ್ವಾಂಡೋ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಡಾನ್‌ಬೋಸ್ಕೋ ಶಾಲೆಯ ಮಕ್ಕಳು ಪದಕಗಳನ್ನು ಗಳಿಸಿದ್ದಾರೆ. ತಸ್ಲಿಂಕೌಸರ್, ನಾಸ್ಲಿಂ ಇವರುಗಳು ಚಿನ್ನದ ಪದಕ ಪಡೆದಿದ್ದಾರೆ. ದಾನೇಶ್‌ಗುರು, ಚಾರ್ವಿ, ಚಿನ್ಮಯ್ ಇವರುಗಳು ಬೆಳ್ಳಿ ಪದಕ, ತುಳಸಿ ಕಂಚಿನ ಪದಕ ಗಿಟ್ಟಿಸಿಕೊಂಡು ಜಿಲ್ಲೆಗೆ ಹಾಗೂ ಶಾಲೆಗೆ ಕೀರ್ತಿ ತಂದಿರುವುದರಿಂದ ಡಾನ್‌ಬೋಸ್ಕೋ ಶಾಲೆಯ ಪ್ರಾಂಶುಪಾಲರಾದ ಉದಯ್, ತರಬೇತುದಾರರಾದ ರುದ್ರೇಶ್ ಮತ್ತು ನವಿತಾ ಇವರುಗಳು ಪದಕಗಳನ್ನು ಪಡೆದಿರುವ ಮಕ್ಕಳಿಗೆ ಶುಭ ಕೋರಿದ್ದಾರೆ.

### ಪ್ರಕೃತಿಗೆ ನಮ್ಮೆಲ್ಲರ ಕೊಡುಗೆ ಹೆಚ್ಚಾಗಿರಲಿ



» **ಪರಶುರಾಂಪುರ**

ಇಂದಿನ ದಿನಮಾನಗಳಲ್ಲಿ ಆರೋಗ್ಯಕರ ಬದುಕನ್ನು ನಡೆಸಲು ಉತ್ತಮ ಜೀವನ ಶೈಲಿಯೊಂದಿಗೆ ಸ್ವಚ್ಛ ಹಾಗೂ ಉತ್ತಮ ಪರಿಸರ ಅತಿ ಅಗತ್ಯವಾಗಿದ್ದು,ಅದಕ್ಕಾಗಿ ನಾವು ಮರ ಗಿಡಗಳನ್ನು ಹೆಚ್ಚು ಹೆಚ್ಚಾಗಿ ಬೆಳೆಸುವ ಮೂಲಕ ಪ್ರಕೃತಿಗೆ ನಮ್ಮ ಕೊಡುಗೆ ನೀಡುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಗ್ರಾಪಂ ಮಾಜಿ ಅಧ್ಯಕ್ಷ ತ್ಯಾಗರಾಜ ಅಭಿಪ್ರಾಯಪಟ್ಟರು. ಸಮೀಪದ ಪಿ.ಮಹದೇವಪುರ ಗ್ರಾಪಂಯ ಮುಜರೆ ಗ್ರಾಮವಾದ ಹೊರಗಡ್ಡೆಯ ಸಾರ್ವಜನಿಕ ರುದ್ರಭೂಮಿಯಲ್ಲಿ ಗುರುವಾರ ಆಯೋಜಿಸಿದ್ದಾ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದರು. ಹಸಿರನ್ನು ಹೆಚ್ಚಿಸಿ ಶುದ್ಧ ಗಾಳಿಯನ್ನು ಪಡೆಯಲು ಪ್ರತಿಯೊಬ್ಬ ಮಗು, ಪ್ರತಿಯೊಬ್ಬ ನಾಗರಿಕರು ಮರಗಿಡಗಳನ್ನು ನೆಟ್ಟು ಉಳಿಸಿ ಬೆಳೆಸಬೇಕಾದ ಅಗತ್ಯವಿದೆ ಎಂದು ಹೇಳಿದರು. ಗ್ರಾಪಂ ಅಧ್ಯಕ್ಷೆ ಕವಿತಾ ರಾಜೇಶ್ ಮಾತನಾಡಿ, ಇಂದಿನ ದಿನಗಳಲ್ಲಿ ಪರಿಸರ ಪ್ರಜ್ಞೆ ಅಗತ್ಯವಿದೆ ಜೊತೆಗೆ ಆರೋಗ್ಯಕರ ವಾತಾವರಣಕ್ಕೆ ಎಲ್ಲರೂ ಕಂಕಣಬದ್ದರಾಗಬೇಕಿದೆ ಎಂದರು. ಉಪಾಧ್ಯಕ್ಷ ಓಬಳೇಶ್ ಮಾತನಾಡಿ, ಪರಿಸರವನ್ನು ಬೆಳೆಸಿ ಪೋಷಣೆ ಮಾಡಿ ಉಳಿಸಿಕೊಳ್ಳುವ ಕಾರ್ಯ ಅಷ್ಟೊಂದು ಸುಲಭವಲ್ಲ. ಪರಿಸರ ಸಂರಕ್ಷಿಸಲು ಎಲ್ಲರಲ್ಲೂ ಹೃದಯವಂತಿಕೆ ಇರಲಿ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಗ್ರಾಮಪಂಚಾಯಿತಿ ಅಧ್ಯಕ್ಷೆ ಕವಿತಾ ರಾಜೇಶ್, ಉಪಾಧ್ಯಕ್ಷ ಓಬಳೇಶ್, ಹಾಗೂ ಮಾಜಿ ಅಧ್ಯಕ್ಷ ತ್ಯಾಗರಾಜ್,ಸದಸ್ಯರಾದ ನಿಂಗಣ್ಣ, ಹನುಮಂತರಾಯಪ್ಪ, ಮತ್ತು ಗ್ರಾಮಸ್ಥರಾದ ಪ್ರತಾಪ್, ಪರಶುರಾಮೇಗೌಡ, ಕೃಷ್ಣಮೂರ್ತಿ, ಶಿವಕುಮಾರ, ಬಸವರಾಜ್, ಸುಧೀರ್, ಈರಣ್ಣ ಹಾಗೂ ಮುಂತಾದವರು ಭಾಗವಹಿಸಿದ್ದರು.

### ಆಗಸ್ಟ್ 12 ರಂದು ಸರ್ಕಾರಿ ನೌಕರರ ಸಂಘದ ನವೀಕೃತ ಕಟ್ಟಡ ಉದ್ಘಾಟನೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ತಾಲ್ಲೂಕು ಪಂಚಾಯಿತಿ ಪಕ್ಕದ ವಾಸವಿ ಲ್ಯಾಬ್ ರಸ್ತೆಯಲ್ಲಿರುವ ಜಿಲ್ಲಾ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನವೀಕೃತ ಕಟ್ಟಡದ ಉದ್ಘಾಟನೆ ಸಮಾರಂಭ ಬರುವ ಸೋಮವಾರ ಆಗಸ್ಟ್ 12 ರಂದು ಬೆಳಿಗ್ಗೆ 10 ಗಂಟೆಗೆ ಜರುಗಲಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸಂಘದ ನವೀಕೃತ ಕಟ್ಟಡ ಉದ್ಘಾಟನೆ ನೆರವೇರಿಸುವರು. ನಂತರ ನಗರದ ತರಾಸು ರಂಗಮಂದಿರದಲ್ಲಿ ಸಂಘದ ಸರ್ವ ಸದಸ್ಯರ ಸಭೆ, ನೌಕರರಿಗೆ ನಾಯಕತ್ವ ಗುಣಗಳು ಹಾಗೂ ವ್ಯಕ್ತಿತ್ವ ವಿಕಸನ ಕಾರ್ಯಗಾರ, ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ನೂತನವಾಗಿ ಆಯ್ಕೆಯಾದ ಸಂಸದ ಗೋವಿಂದ ಎಂ ಕಾರಜೋಳ ಹಾಗೂ ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ ಅವರಿಗೆ ಅಭಿನಂದಿಸಲಾಗುವುದು. ನೌಕರ ಸಂಘದ ಜಿಲ್ಲಾಧ್ಯಕ್ಷ ಕೆ.ಟಿ.ತಿಮ್ಮಾರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

# ಸಹಕಾರ ಸಂಸ್ಥೆ ಕ್ರಿಯಾಶೀಲವಾಗಿಸಲು ಬೇಕಾದ ಮಾರ್ಗದರ್ಶನ ನೀಡಲು ಸಂಯುಕ್ತ ಸಹಕಾರಿ ಸಿದ್ದ

» **ಚಿತ್ರದುರ್ಗ**

ಚಿತ್ರದುರ್ಗಜಿಲ್ಲೆಯಲ್ಲಿಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದಲ್ಲಿ 101 ನೊಂದಾಯಿತ ಸೌಹಾರ್ದ ಸಹಕಾರ ಸಂಘಗಳಿವೆ. ಜಿಲ್ಲೆಯಲ್ಲಿ ನಾಲ್ಕು ಸೌಹಾರ್ದ ಸಹಕಾರ ಸಂಘಗಳು ಮಾತ್ರ ನಷ್ಟದಲ್ಲಿವೆ. ತಟಸ್ಥವಾಗಿರುವ ಸಹಕಾರ ಸಂಸ್ಥೆಗಳನ್ನು ಕ್ರಿಯಾಶೀಲವಾಗಿಸಲು ಬೇಕಾದ ಸಲಹೆ, ಮಾರ್ಗದರ್ಶನ ನೀಡಲು ಸಹಕಾರಿ ಸಿದ್ದವಾಗಿದೆ ಎಂದುಕರ್ನಾಟಕರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತರಾಜ್ಯಾಧ್ಯಕ್ಷ ಜಿ. ನಂಜನಗೌಡ ಭರವಸೆ ನೀಡಿದರು.

ನಗರದಐಶ್ವರ್ಯ ಹೊಟೇಲ್ ನಲ್ಲಿಚಿತ್ರದುರ್ಗಜಿಲ್ಲೆಯ ಸೌಹಾರ್ದ ಸಹಕಾರಿಗಳ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯಕಾರ್ಯ ನಿರ್ವಾಹಕರುಗಳಿಗೆ ಏರ್ಪಡಿಸಿದ್ದ ಸಂಪರ್ಕ ಸಭೆ ಹಾಗೂ ವಿಷಯಾಧಾರಿತತರಬೇತಿಉದ್ಘಾಟನೆ ನೆರವೇರಿಸಿ, ಅವರು ಮಾತನಾಡಿದರು.

ಕ್ರಿಯಾಶೀಲವಲ್ಲದ ಸಹಕಾರ ಸಂಸ್ಥೆಗಳನ್ನು ನೊಂದಣಿ ಪುಸ್ತಕದಲ್ಲಿ ಟ್ಟುಕೊಳ್ಳುವ ಅಗತ್ಯವಿಲ್ಲವೆಂದು ತೀರ್ಮಾನಿಸಿದ್ದೇವೆ. ಆದ್ದರಿಂದಎಲ್ಲಾ ಸಹಕಾರ ಸಂಸ್ಥೆಗಳು ಕ್ರಿಯಾಶೀಲ ವಾಗಿರಬೇಕುಎಂದು ಎಚ್ಚರಿಸಿದರು. ಸರ್ಕಾರಇತ್ತೀಚೆಗೆ ಸಹಕಾರಕಾಯ್ದೆಗೆತಿದ್ದುಪಡಿತಂದಿರುವ ಕೆಲವು ಅಂಶಗಳು ಮಾರಕವಾಗಿವೆ. ರಾಜ್ಯ ಉಚ್ಚ ನ್ಯಾಯಾಲಯದಿಂದ ಮಾರಕವಾಗುವಂತ ಅಂಶಗಳ ಬಗ್ಗೆ ತಡೆಯಾಜ್ಞೆತರಲಾಗಿದೆ. ಅಲ್ಲದೆ, ಸರ್ಕಾರದ ಸಂಬಂಧಪಟ್ಟ ಸಚಿವರ ಗಮನಕ್ಕೆ ತಂದು ಮಾರಕವಾಗಬಹುದಾದ ಅಂಶಗಳನ್ನು ಕೈಬಿಡುವಂತೆ ಮನವೊಲಿಸುವ ಪ್ರಯತ್ನವನ್ನು ಮಾಡಲಾಗಿದೆಎಂದು ಜಿ. ನಂಜನಗೌಡ ತಿಳಿಸಿದರು.



ಸಹಕಾರಿಯಉಪಾಧ್ಯಕ್ಷ ಎ. ಆರ್. ಪ್ರಸನ್ನಕುಮಾರ್ ಮಾತನಾಡಿ, ರಾಜ್ಯದ ಸೌಹಾರ್ದ ಸಹಕಾರಿಗಳ ಬೆಳವಣಿಗೆಗೆ ಇಂತಹ ಸಂಪರ್ಕ ಸಭೆಅವಶ್ಯವಾಗಿದೆ. ಸೌಹಾರ್ದಚಳುವಳಿಗೆ25ವರ್ಷವಾಗಿರುವ ಹಿನ್ನೆಲೆಯಲ್ಲಿ 2025ರ ಜನವರಿ 01 ರಿಂದ ವರ್ಷಪೂರ್ತಿಕಾರ್ಯಕ್ರಮ ಹಮ್ಮಿಕೊಳ್ಳಲು ಚಿಂತನೆ ನಡೆಸಲಾಗಿದೆ. ಇದೇ ತಿಂಗಳ 23 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಮಹಾ ಸಭೆಯಲ್ಲಿತೀರ್ಮಾನಿಸಲಾಗುವುದು.

ಸಂಯುಕ್ತ ಸಹಕಾರಿಯು ಕಾಲ ಕಾಲಕ್ಕೆ ಸಹಕಾರಿಗಳಿಗೆ ತರಬೇತಿ + ಶಿಕ್ಷಣ + ಪ್ರಚಾರ + ನಿಯಂತ್ರಣ ಮಾಡಿಕೊಂಡು ಬರುತ್ತಿದೆ. ಸಹಕಾರಿಗಳು ತರಬೇತಿಯಲ್ಲಿ ಹೆಚ್ಚೆಚ್ಚು ಪಾಲ್ಗೊಳ್ಳಬೇಕೆಂದು ಕಿವಿಮಾತು ಹೇಳಿದರು.

ಸಂಯುಕ್ತ ಸಹಕಾರಿಯ ನಿಕಟ ಪೂರ್ವಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕಬಿ.ಎಚ್. ಕೃಷ್ಣಾರೆಡ್ಡಿ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತದೇಶದಲ್ಲಿ 8.5 ಲಕ್ಷ ಸಹಕಾರ ಸಂಸ್ಥೆ ಗಳಿದ್ದು, 32 ಕೋಟಿ ಸದಸ್ಯರುಗಳಿದ್ದಾರೆ. ದೇಶದ ಶೇ. 97 ರಷ್ಟು ವಿವಿಧ ಪರಿಕರಗಳಲ್ಲಿ ಸಹಕಾರಿ ಸಂಸ್ಥೆಗಳು ಕೆಲಸ ಮಾಡುತ್ತಿವೆ. ಹಾಗಾಗಿ ಕೇಂದ್ರ ಸರ್ಕಾರ ಸಹಕಾರ ಇಲಾಖೆಗೆ ಪ್ರತ್ಯೇಕ ಸಚಿವಾಲಯವನ್ನು ಸ್ಥಾಪಿಸಿ, ಇಲಾಖೆ ನೋಡಿಕೊಳ್ಳಲು ಕ್ಯಾಬಿನೆಟ್ ಮತ್ತುರಾಜ್ಯ ಸಚಿವರನ್ನು ನೇಮಿಸ ಲಾಗಿದೆ.

ರಾಜ್ಯ ಸರ್ಕಾರತಿದ್ದುಪಡಿ ಮಾಡಿರುವ ಸಹಕಾರಕಾಯ್ದೆ ಬಹು ತೇಕ ಅಂಶಗಳು ಸಹಕಾರಿಗಳ ಪರ ವಾಗಿದ್ದರೂ ಕೆಲವು ಮಾರಕವಾಗಿವೆ. ಮಾರಕ ಅಂಶಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗಿದ್ದು, ಸರಿಪಡಿ ಸುವ ಪ್ರಯತ್ನದಲ್ಲಿದ್ದೇವೆ.

ಸರ್ಕಾರತಿದ್ದುಪಡಿ ಮಾಡಿರುವ ಸಹಕಾರಿಕಾಯ್ದೆಯಲ್ಲಿರುವ ಪೂರಕ ಹಾಗೂ ಮಾರಕ ಅಂಶಗಳ ಅನುಕೂಲ ಹಾಗೂ ಅನಾನುಕೂಲಗಳ ಬಗ್ಗೆ ಸಭೆಯಲ್ಲಿದ್ದ ಸಹಕಾರಿಗಳಿಗೆ ಮನವರಿಕೆ ಮಾಡಿಕೊಟ್ಟರು.

ಸಹಕಾರಿಗಳ ಅನುಕೂಲಕ್ಕಾಗಿ ಸಂಯುಕ್ತ ಸಹಕಾರಿ ಪದಾಧಿಕಾರಿಗಳು ಮನವರಿಕೆ ಮಾಡಿಕೊಟ್ಟ ಮೇಲೆ ತಿದ್ದುಪಡಿ ಮಾಡಬೇಕಾದ ಅಂಶಗಳ ಕುರಿತು ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತ ಪಡಿಸಿದ ಸರ್ಕಾರದ ಸಹಕಾರ ಸಚಿ ವರು, ನಮ್ಮೊಡನೆ ಬೆಂಬಳಕ್ಕೆ ನಿಂತ ಮಾಜಿ ಸಚಿವ ಮುರುಗೇಶ್ ನಿರಾಣಿ, ವಿಧಾನ ಪರಿಷತ್ತಿನ ಸದಸ್ಯಕೆ.ಎಸ್. ನವೀನ್ ಹಾಗೂ ಸಹಕರಿಸಿದ ಎಲ್ಲರಿಗೂ ಸಂಯುಕ್ತ ಸಹಕಾರಿಯಿಂದ ಅಭಿನಂದನೆಗಳನ್ನು ಹೇಳಿದರು.ಚಿತ್ರದುರ್ಗಜಿಲ್ಲಾ ಸೌಹಾರ್ದ ಸಹಕಾರಿಒಕ್ಕೂಟದಜಿಲ್ಲಾಧ್ಯಕ್ಷ ಸಿ. ವೀರಭದ್ರಬಾಬು ಮಾತನಾಡಿ, ಸಹಕಾರಿ ಸಂಘಗಳು ಸೌಹಾರ್ದ ಸಂಯುಕ್ತ ಸಹಕಾರಿಗೆ ನೀಡುವ ವಾರ್ಷಿಕ ವಂತಿಗೆಯಲ್ಲಿಇಂತಿಷ್ಟುಎಂದುಜಿಲ್ಲಾ ಸಹಕಾರಿ ಸಂಘಗಳು ಹಮ್ಮಿಕೊಳ್ಳುವಂತ ಕಾರ್ಯಕ್ರಮಗಳಿಗೆ ನೀಡಿದರೆ ಸಹಕಾರಿಗಳಲ್ಲಿ ಉಪಯುಕ್ತಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉತ್ಸುಕತೆ ಜಾಸ್ತಿಯಾಗುತ್ತದೆ. ಈ ನಿಟ್ಟಿನಲ್ಲಿ ಪದಾಧಿಕಾರಿಗಳು ಚಿಂತಿಸಲು ಸಲಹೆ ನೀಡಿದರು.

ಜಿಲ್ಲಾ ಉಪಾಧ್ಯಕ್ಷ ತಿಪ್ಪೇಸ್ವಾಮಿ ಮಾತನಾಡಿ, ಜಿಲ್ಲಾ ಸಹಕಾರಿಗಳಿಗೆ ಅನುಕೂಲವಾಗುವಂತಇಂತಹ ವಿಷಯಾಧಾರಿತ ತರಬೇತಿಗಳು ನಿರಂತರವಾಗಿರಲಿ ಎಂದುಅಭಿಪ್ರಾಯಪಟ್ಟರು.

ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಹಾಗೂ ಮರ್ಚೆಂಟ್ಸ್ ಬ್ಯಾಂ ಕಿನ ನಿರ್ದೇಶಕರಘುರಾಮರೆಡ್ಡಿಕಾರ್ಯಕ್ರಮದಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲಾ ಸಹಕಾರಿಗಳಿಗೆ ವಿಷಯಾಧಾರಿತ ವಿಷಯಗಳ ಬಗ್ಗೆ ತರಬೇತಿ ನೀಡಲುರಾಜ್ಯ ಸಹಕಾರಿ ಸದಾ ಸಿದ್ಧ. ತರಬೇತಿಗಳಿಗೆ ಸಹಕಾರಿ ಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗಪಡಿಸಿಕೊಳ್ಳಬೇಕಾಗಿದೆ ಎಂದು ಕಿವಿಮಾತು ಹೇಳಿದರು.

ಸಹಕಾರಿಗಳು ಸಹಕಾರಕ್ಕೆ ಸಂಬಂಧಿಸಿದ ಡಿಸಿಎಂ ಕೋರ್ಸ್ ಸೇರಿ. ಜಿಲ್ಲೆಯ ಸಹಕಾರಸಂಸ್ಥೆಗಳನ್ನುಇನ್ನೂಉತ್ತಮವಾಗಿ ಬೆಳೆಸಿ, ಜಿಲ್ಲೆಗೆಕೀರ್ತಿತರುವ ಹೊಣೆಗಾರಿಕೆಜಿಲ್ಲೆಯಎಲ್ಲಾ ಸಹಕಾರಿಗಳ ಮೇಲಿದೆ. ಎಲ್ಲಾ ಸಹಕಾರಿಗಳು ಈ ನಿಟ್ಟಿನಲ್ಲಿ ಗಮನ ಹರಿಸಬೇಕೆಂದುಕರೆ ನೀಡಿದರು.ಶ್ರೀಮತಿ ಕವಿತಾ ಪ್ರಾರ್ಥಿಸಿದರು. ಪ್ರಾಂತೀಯ ವ್ಯವಸ್ಥಾಪಕ ಶ್ರೀಧರ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸೌಹಾರ್ದಡೆವಲಪ್‌ಮೆಂಟ್‌ಅಧಿಕಾರಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಮರ್ಚೆಂಟ್ಸ್ ಬ್ಯಾಂಕಿನ ಮುಖ್ಯಕಾರ್ಯ ನಿರ್ವಹಣಾಧಿಕಾರಿಕೆ. ಆರ್. ಮಲ್ಲಿಕಾರ್ಜುನ ವಂದಿಸಿದರು.

# ಎಲ್ಲ ಮಕ್ಕಳಿಗೂ ಒದಗಿಸಲಿದೆ ಸಮಗ್ರ ಆರೈಕೆ

» **ಚಿತ್ರದುರ್ಗ**

ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮ ಸಮುದಾಯದ ಎಲ್ಲಾ ಮಕ್ಕಳಿಗೆ ಸಮಗ್ರ ಆರೈಕೆ ಒದಗಿಸುವ ಕಾರ್ಯಕ್ರಮವಾಗಿದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಇಲ್ಲಿನ ತಾಲ್ಲೂಕು ಆರೋಗ್ಯಾಧಿಕಾರಿ ಕಛೇರಿಯ ಸಭಾಂಗಣದಲ್ಲಿ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮದಲ್ಲಿ ಆರ್‌ಬಿಎಸ್‌ಕೆ ತಂಡ ಪತ್ತೆ ಹಚ್ಚಿ ಉನ್ನತ ಮಟ್ಟದ ಚಿಕಿತ್ಸೆಗೆ ಹೈಟೆಕ್ ಆಸ್ಪತ್ರೆಗೆ ನಿರ್ದೇಶನ ಮಾಡಲು ತಪಾಸಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮ (ಆರ್‌ಬಿಎಸ್‌ಕೆ) ಮಕ್ಕಳ ಒಟ್ಟಾರೆ ಜೀವನದ ಗುಣಮಟ್ಟ ಸುಧಾರಿಸಲು ಮತ್ತು ಸಮುದಾಯದ 18 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ ಸಮಗ್ರ ಆರೈಕೆ ಒದಗಿಸುವ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ ಮಾತನಾಡಿ, ಚಿತ್ರದುರ್ಗ ತಾಲ್ಲೂಕಿನಲ್ಲಿ ಎರಡು ಆರ್‌ಬಿಎಸ್‌ಕೆ ತಪಾಸಣೆ ತಂಡ ರಚನೆ ಮಾಡಿ ತಾಲ್ಲೂಕಿನ ಎಲ್ಲಾ ಅಂಗನವಾಡಿ, ಶಾಲೆಯಲ್ಲಿ ಮಕ್ಕಳ ತಪಾಸಣೆ ನಡೆಸಲಾಗಿದೆ ಎಂದು ತಿಳಿಸಿದರು. ಆರ್‌ಬಿಎಸ್‌ಕೆ ವೈದ್ಯಾಧಿಕಾರಿ ಡಾ.ಮಹೇಂದ್ರ ಕುಮಾರ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಆರ್‌ಬಿಎಸ್‌ಕೆ ತಂಡದ ವೈದ್ಯಾಧಿಕಾರಿಗಳಾದ ಡಾ.ಸುಪ್ರಿತಾ, ಡಾ.ಮಂಜುಳಾ, ಡಾ.ವಾಣಿ, ಶುಶ್ರೂಷಾಧಿಕಾರಿ ಪೂಜಾ, ಅಕ್ಷತಾ, ನೇತ್ರಾಧಿಕಾರಿಗಳಾದ ಮೈತ್ರಾ, ರಾಘವೇಂದ್ರ, ಆರೋಗ್ಯ ಸುರಕ್ಷತಾಧಿಕಾರಿ ಕಾತ್ಯಾಣಮ್ಮ, ಆಶಾ ಭೋಧಕಿ ತಬಿತಾ ಇದ್ದರು. ಶಿಬಿರದಲ್ಲಿ ಭಾಗವಹಿಸಿದ 10 ಅರ್ಹ ಫಲಾನುಭವಿ ಮಕ್ಕಳನ್ನು ಉಚಿತ ಇಕೋ ಪರೀಕ್ಷೆಗಾಗಿ ಚಿತ್ರದುರ್ಗ ಬಸವೇಶ್ವರ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗೆ ನಿರ್ದೇಶನ ಮಾಡಲಾಯಿತು.

## ಒನಕೆ ಓಬವ್ವ ಜ್ಞಾನವಿಕಾಸ ಕೇಂದ್ರದಲ್ಲಿ ಸಿರಿಧಾನ್ಯಗಳ ಬಳಕೆ ಕುರಿತು ಮಾಹಿತಿ ಕಾರ್ಯಕ್ರಮ



» **ಚಿತ್ರದುರ್ಗ**

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ಹಿರೇಗುಂಟನೂರು ವಲಯದ ಬೆನಕನಹಳ್ಳಿ ಕಾರ್ಯಕ್ಷೇತ್ರದ ಒನಕೆ ಓಬವ್ವ ಜ್ಞಾನವಿಕಾಸ ಕೇಂದ್ರದಲ್ಲಿ ನಡೆದ ಮಾಸಿಕ ಸಭೆಯಲ್ಲಿ ಪೌಷ್ಠಿಕ ಆಹಾರ ಸಿರಿಧಾನ್ಯ ಬಳಕೆ ಕುರಿತು ಮಾಹಿತಿ ನೀಡಲಾಯಿತು.

ತಾಲ್ಲೂಕು ಯೋಜನಾಧಿಕಾರಿ ರವಿಚಂದ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಹಿಂದಿನ ಕಾಲದ ಜನ ನವಣೆ, ಸಜ್ಜೆ ಸೇರಿದಂತೆ ಅನೇಕ ಸಿರಿಧಾನ್ಯಗಳನ್ನುಬಳಸಿಆರೋಗ್ಯವಂತರಾಗಿರುತ್ತಿದ್ದರು.ಈಗಿನಆಧುನಿಕ ಯುಗದಲ್ಲಿ ಎಲ್ಲರೂ ಫಾಸ್ಟ್‌ಫುಡ್‌ಗೆ ಆಕರ್ಷಿತರಾಗಿರುವುದರಿಂದ ನಾನಾ ರೀತಿಯ ತೊಂದರೆಗಳನ್ನು ಅನುಭವಿಸುವಂತಾಗಿದೆ. ಸಕ್ಕರೆ ಕಾಯಿಲೆ, ರಕ್ತದೊತ್ತಡ ಇನ್ನು ಅನೇಕ ವ್ಯಾದಿಗಳನ್ನು ಗುಣಪಡಿಸುವ ಶಕ್ತಿ ಸಿರಿಧಾನ್ಯಕ್ಕಿದೆ. ಹಾಗಾಗಿ ಇಂದಿನ ವಾತಾವರಣಕ್ಕೆ ತಕ್ಕಂತೆ ಪ್ರತಿಯೊಬ್ಬರು ಸಿರಿಧಾನ್ಯಗಳನ್ನು ಬಳಸುವುದು ಒಳ್ಳೆಯದು ಎಂದು ಹೇಳಿದರು.ವಲಯ ಮೇಲ್ವಿಚಾರಕ ಸೈಯದ್‌ಯೂನಿಸ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ, ಕಾರ್ಯಕ್ಷೇತ್ರದ ಸೇವಾ ಪ್ರತಿನಿಧಿಗಳಾದ ರೂಪ, ಕಾವ್ಯ, ರೇಖ, ದೀಪ, ಲಕ್ಷ್ಮಿ, ಕಮಲಮ್ಮ ಹಾಗೂ ಜ್ಞಾನವಿಕಾಸ ಕೇಂದ್ರ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು

## ಉತ್ತಮ ಸಮಾಜ ಸೇವೆಗೆ ಹಿರಿಯ ನಾಗರಿಕರಿಂದ ಅರ್ಜಿ ಆಹ್ವಾನ

**ದಾವಣಗೆರೆ:** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ, ಕ್ರೀಡೆ ಮತ್ತು ಹಿರಿಯ ನಾಗರಿಕರ ಸೇವಾ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ಪ್ರಶಸ್ತಿ ನೀಡುಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಹಿರಿಯ ನಾಗರಿಕರ ಸಬಲೀಕರಣಾಧಿಕಾರಿಗಳ ಕಚೇರಿ, ಕುವೆಂಪು ನಗರ, 14ನೇ ಮುಖ್ಯ ರಸ್ತೆ, ಶಂಕರಲೀಲಾ ಗ್ಯಾಸ್ ಏಜೆನ್ಸಿ ಹತ್ತಿರ, ಎಂ.ಸಿ.ಸಿ ಬಿ.ಬ್ಲಾಕ್ ಇಲ್ಲಿ ಅರ್ಜಿ ಪಡೆದು ಆಗಸ್ಟ್ 31 ರೊಳಗೆ ಸಲ್ಲಿಸಬೇಕು.

## ಪ್ರಮುಖ ಸುದ್ದಿ

### ಸಹಾಕಾರ ಯೂನಿಯನ್ ಅಧ್ಯಕ್ಷ ಹೆಚ್.ಎಂ.ದ್ಯಾಮಣ್ಣ ಹೇಳಿಕೆ

# ಒತ್ತಡಗಳಿಗೆ ಮಣಿಯದೇ ಚುನಾವಣೆ ಕಾರ್ಯ ನಿರ್ವಹಿಸಿ

» **ಚಿತ್ರದುರ್ಗ**

ಸಹಾರ ಸಂಘದ ಚುನಾವಣೆಗಳಲ್ಲಿ ಯಾರ ಒತ್ತಡಕ್ಕೆ ಯಾವ ರಾಜಕೀಯ ಶಿಫಾರಸ್ಸುಗಳಿಗೆ ಬಲಿಯಾಗದೆ ಕೆಲಸ ನಿರ್ವಹಿಸುವಂತೆ ಚಿತ್ರದುರ್ಗ ಯೂನಿಯನ್ನಿನ ಅಧ್ಯಕ್ಷ ಹೆಚ್. ಎಂ.ದ್ಯಾಮಣ್ಣ ಹೇಳಿದರು.

ಸಹಕಾರ ಇಲಾಖೆ, ಬೆಂಗಳೂರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿ. ಸಂಯುಕ್ತ ಆಶ್ರಯದಲ್ಲಿ ಗುರುವಾರ ಕೆಳಗೋಟೆ ಸಹಕಾರ ಭವನ ಸಭಾಂಗಣದಲ್ಲಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಟಿಎಪಿಸಿಎಂಎಸ್ ಮತ್ತು ಪಿಕಾರ್ಡ್ ಬ್ಯಾಂಕುಗಳ ವ್ಯವಸ್ಥಾಪಕರುಗಳಿಗೆ ಆಯೋಜಿಸಲಾದ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಎಲ್ಲಾ ವರ್ಗದ ಜನರಿಗೆ ನ್ಯಾಯ ದೊರಕಲಿ ಎಂಬ ಚಿಂತನೆಯಿಂದ ಸರ್ಕಾರ ಹಾಗೂ ಚುನಾವಣೆ ಆಯೋಗ ಆದಾಗಿನಿಂದ ಸರ್ಕಾರ ಎಲ್ಲಾ ವರ್ಗದ ಜನರಿಗೆ ಮೀಸಲಾತಿ ನಿಗದಿ ಮಾಡುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ನೀವೆಲ್ಲರೂ ಇದಕ್ಕೆ ಬಹಳ ಮಹತ್ವ ನೀಡಬೇಕು ಎಂದು ತಿಳಿಸಿದರು.ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಹಾಗೂ ಸಹಕಾರ ರತ್ನ ಪುರಸ್ಕೃತ ಜಿಂಕಲು ಬಸವರಾಜು ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿ, ಸಹಕಾರ ಬ್ಯಾಂಕ್ ಮತ್ತು ಸಹಕಾರ ಸಂಘಗಳಲ್ಲಿ ಚುನಾವಣೆ ಇತ್ತೀಚಿನ ದಿನಗಳಲ್ಲಿ ಅನೇಕ ತಿದ್ದುಪಡಿಗಳು ಆಗುತ್ತಿವೆ. ಯಾರು ಕೂಡ ಮತದಾನದಿಂದ ವಂಚಿತರಾಗಬಾರದು. ಕಾನೂನು ರೀತ್ಯಾ ಯಾವುದೇ ರೀತಿಯಲ್ಲಿ ಸಂಘವು ಸುಸ್ತಿದಾರರಾಗದಂತೆ ಸಂಘದ ಕಾರ್ಯದರ್ಶಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.



ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕ ದಿಲೀಪ್‌ಕುಮಾರ್, ಆರ್. ಎಸ್. ಮಾತನಾಡಿ ಪ್ರಜಾಪ್ರಭುತ್ವದಲ್ಲಿ ಚುನಾವಣೆಗೆ ಬಹಳ ಮಹತ್ವವಿದೆ. ಚುನಾವಣೆ ಸುಗುಮವಾಗಿ ನಡೆಯಲು ಸಹಕಾರ ಸಂಘಗಳ ಕಾರ್ಯನಿರ್ವಾಹಕ ನಿಮ್ಮಜವಾಬ್ದಾರಿ ಬಹಳ ಮುಖ್ಯ. ಕಾನೂನು ಏನು ಹೇಳುತ್ತದೆ ಅದನ್ನು ಅರ್ಥ ಮಾಡಿಕೊಂಡು ಕೆಲಸ ಮಾಡಬೇಕು ಎಂದರು.ಕಾರ್ಯಗಾರದಲ್ಲಿ ನಿವೃತ್ತ ಸಹಕಾರ ಸಂಘಗಳ ಸಹಾಯಕ ನಿಬಂಧಕ ಎಸ್.ವಿ.ಬಸವರಾಜ್, ಸಹಕಾರ ಸಂಘಗಳ ಇತ್ತೀಚಿನ ತಿದ್ದುಪಡಿ ಕಾಯ್ದೆ, ಕಾನೂನು ಮುಖ್ಯಾಂಶ ಹಾಗೂ ಸಹಕಾರ ಸಂಘಗಳ ಚುನಾವಣೆ ಜರುಗಿಸುವ ವಿಧಿವಿಧಾನಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಚಳ್ಳಕೆರೆ, ಹಿರಿಯೂರು ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಟಿಎಪಿಸಿಎಂಎಸ್ ಮತ್ತು ಪಿಕಾರ್ಡ್ ಬ್ಯಾಂಕುಗಳ ವ್ಯವಸ್ಥಾಪಕರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಜಿ.ಈ.ಅಜ್ಜಪ್ಪ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಾಗರಾಜ್ ಪಾಟೀಲ್, ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ ಮಹೇಶ್, ಡಿಸಿಸಿ ಬ್ಯಾಂಕಿನ ಮೇಲ್ವಿಚಾರಕಿ ದಾದಾವಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹೊಸದುರ್ಗ ಹಲವೆಡೆ ಇಂದು ವಿದ್ಯುತ್ ವ್ಯತ್ಯಯ

» **ಹೊಸದುರ್ಗ**

ರಸ್ತೆ ಅಗಲೀಕರಣ ಮತ್ತು ಒಳ ಚರಂಡಿ ನಿರ್ವಹಣಾ ಕಾಮಗಾರಿ ನಿರ್ವಹಿಸುತ್ತಿರುವುದರಿಂದ ಆಗಸ್ಟ್ 9 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೂ ಹೊಸದುರ್ಗ 66/11 ಕೆ.ವಿ ವಿದ್ಯುತ್ ಕೇಂದ್ರದಿಂದ ಸರಬರಾಜು ಆಗುವ ಹೊಸದುರ್ಗ ಪಟ್ಟಣದ ಸಿದ್ದರಾಮೇಶ್ವರ ನಗರ, ರಾಘವೇಂದ್ರ ಬಡಾವಣೆ, ಶಿವಲಿಂಗಪ್ಪ ಬಡಾವಣೆ, ಸಿದ್ದೇಶ್ವರ ಲೇಔಟ್, ಇಂಡಸ್ಟ್ರೀಯಲ್ ಏರಿಯಾ ,ಕನಕ ಬಡಾವಣೆ, ಯಲಕ್ಕಪ್ಪಮನಹಟ್ಟಿ, ಶಿವನೇಕಟ್ಟೆ ಗ್ರಾಮ ಮತ್ತು ಕಂಗುವಳ್ಳಿ ಮತ್ತು ಬೋಕಿಕೆರೆ ಪಂಚಾಯಿತಿಯ ಎಲ್ಲಾ ಗ್ರಾಮಗಳು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು ಸಾರ್ವಜನಿಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ ಲಾವಣ್ಯ ಎಸ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆ.11ರಂದು ವಾಲ್ಮೀಕಿ ಪ್ರತಿಭಾ ಪುರಸ್ಕಾರ ಮತ್ತು ವೃತ್ತಿ ಮಾರ್ಗದರ್ಶನ ಕಾರ್ಯಗಾರ



» **ಹೊಸದುರ್ಗ**

ಪಟ್ಟಣದ ನ್ಯೂ ಬನಶಂಕರಿ ಬಡಾವಣೆಯಲ್ಲಿರುವ ವಾಲ್ಮೀಕಿ ಸಮುದಾಯ ಭವನದಲ್ಲಿ ಇದೇ ತಿಂಗಳ ಆಗಸ್ಟ್ 11 ರ ಭಾನುವಾರದಂದು 2023–24 ನೇ ಸಾಲಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ನಾಯಕ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ವೃತ್ತಿ ಮಾರ್ಗದರ್ಶನ ಕಾರ್ಯಗಾರವನ್ನು ಆಯೋಜನೆ ಮಾಡಲಾಗಿದೆ ಎಂದು ತಾಲೂಕು ವಾಲ್ಮೀಕಿ ನಾಯಕ ನೌಕರರ ಸಂಘದ ಅಧ್ಯಕ್ಷ ಜಯಪ್ರಕಾಶ್ ಹೇಳಿದರು. ಪಟ್ಟಣದ ಬೇಡರ ಕಣ್ಣಪ್ಪ ಸಮುದಾಯ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ವರ್ಷವೂ ತಾಲ್ಲೂಕು ನಾಯಕ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಕ್ಷೇತ್ರದ ಶಾಸಕರಾದ ಬಿ.ಜಿ.ಗೋವಿಂದಪ್ಪನವರು ಉದ್ಘಾಟಿಸಲಿದ್ದಾರೆ. ಪ್ರಸ್ತಾವಿಕವಾಗಿ ಸಂಘದ ಕಾರ್ಯದರ್ಶಿ ಮೈಲಾರಪ್ಪ ಮಾತನಾಡಲಿದ್ದು, ವಿದ್ಯಾರ್ಥಿಗಳಿಗೆ ಮುಂದಿನ ಶೈಕ್ಷಣಿಕ ಅವಕಾಶಗಳ ಕುರಿತು ತಹಶೀಲ್ದಾರ್ ತಿರುಪತಿ ಪಾಟೀಲ್ ವೃತ್ತಿ ಮಾರ್ಗದರ್ಶನ ಉಪನ್ಯಾಸ ನೀಡಲಿದ್ದಾರೆ. ನಂತರ ನಿವೃತ್ತ ನೌಕರರಿಗೆ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ, ಅತಿಥಿಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ತುಮಕೂರು ನ್ಯಾಯಾಲಯದ ಸಹಾಯಕ ಸರ್ಕಾರಿ ಅಭಿಯೋಜಕ ರುದ್ರಮುನಿ, ಪೊಲೀಸ್ ಇನ್ಸ್ಪೆಕ್ಟರ್ ತಿಮ್ಮಣ್ಣ, ಗ್ರೇಡ್–ಬಿ ತಹಶೀಲ್ದಾರ್ ಪಾಲಯ್ಯ, ಕ್ಷೇತ್ರ ಶಿಕ್ಷಣ ಸಮನ್ವಯಾಧಿಕಾರಿ ಶ್ರೀನಿವಾಸ್, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಾಂತಪ್ಪ ಮತ್ತು ತಾ.ಪಂ. ಸಹಾಯಕ ನಿರ್ದೇಶಕ ಶಿವಮೂರ್ತಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಮುದಾಯದ ಚುನಾಯಿತ ಪ್ರತಿನಿಧಿಗಳು, ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಮುದಾಯದ ನೂರಾರು ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು. ಈ ವೇಳೆ ತಾಲೂಕು ವಾಲ್ಮೀಕಿ ನಾಯಕ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಮೈಲಾರಪ್ಪ ಸೇರಿದಂತೆ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಹಾಜರಿದ್ದರು.

### ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಜಗಳೂರು ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 1 ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು 28 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 9 ಕೊನೆಯ ದಿನ. ಅರ್ಜಿಯನ್ನು ವೆಬ್ ಸೈಟ್ http://karnemakaone.kar.nic.in/abcd/ ಮತ್ತು http://dwcd.karnataka.gov.in ಸಲ್ಲಿಸಬಹುದು ಎಂದು ಜಗಳೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

# ವ್ಯಸನ ಮುಕ್ತ ಸಮಾಜಕ್ಕೆ ಆರೋಗ್ಯಯುತ ಹವ್ಯಾಸ

## ದೈಹಿಕ, ಮಾನಸಿಕ ಕ್ರಿಯಾಶೀಲನೆಗೆ ಒತ್ತು ನೀಡಲು ವಿದ್ಯಾರ್ಥಿಗಳಿಗೆ ಸಲಹೆ; ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ

» **ದಾವಣಗೆರೆ**

ಮಕ್ಕಳು ವ್ಯಸನ ಮುಕ್ತರಾಗಿ ಆರೋಗ್ಯಯುತ ಸಮಾಜ ನಿರ್ಮಾಣಕ್ಕಾಗಿ ಒಳ್ಳೆಯ ಹವ್ಯಾಸಗಳನ್ನು ಬೆಳೆಸಿಕೊಂಡು ತಮ್ಮ ದೈಹಿಕ ಹಾಗೂ ಮಾನಸಿಕ ವಿಕಸನಕ್ಕಾಗಿ ಸದಾ ಕ್ರಿಯಾಶೀಲರಾಗಿರಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕರೆ ನೀಡಿದರು.



ಅವರು ಗುರುವಾರ ರಾಮನಗರದಲ್ಲಿನ ಗಾಂಧಿ ಭವನದಲ್ಲಿ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ, ಎನ್.ಎಸ್.ಎಸ್, ಭಾರತ ಸೇವಾದಳ, ಗ್ರಾಮ ಸ್ವರಾಜ್ ಅಭಿಯಾನ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ವ್ಯಸನ ಮುಕ್ತ ದಿನಾಚರಣೆ ಅಂಗವಾಗಿ ಏರ್ಪಡಿಸಲಾದ ವ್ಯಸನ ಮುಕ್ತ ಶಿಬಿರ ಮತ್ತು ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ಏರ್ಪಡಿಸಲಾದ ಕ್ವಿಟ್ ಇಂಡಿಯಾ ಚಳುವಳಿ ಒಂದು ನೆನಪು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ವ್ಯಸನಗಳಿಗೆ ಬಲಿಯಾಗದೆ ತಮ್ಮ ದೈಹಿಕವಾದ ಬೆಳವಣಿಗೆಗೆ ಬೇಕಾದ ಆಟ ಮತ್ತು ಮಾನಸಿಕ ಬೆಳವಣಿಗೆಗೆ ಬೇಕಾದ ಜ್ಞಾನಾರ್ಜನೆ ಕಡೆ ಹೆಚ್ಚು ಒತ್ತು ಕೊಡಬೇಕು. ಈಗಿನ ಮಕ್ಕಳು ಮೊಬೈಲ್ ಹೆಚ್ಚು ಬಳಸುತ್ತಿದ್ದು ಇದು ಸಹ ಒಂದು ರೀತಿಯ ವ್ಯಸನವಾಗಿದೆ. ಇದರಿಂದ ಆರೋಗ್ಯಕ್ಕೆ ಅಪಾಯವಾಗಲಿದ್ದು ಮುಂದೊಂದು ದಿನ ಕುತ್ತಿಗೆ, ಬೆನ್ನು, ಕೈ ನೋವು ಎಂದು ಹೇಳಬಹುದು. ಕಳೆದಿಪ್ಪತ್ತು ವರ್ಷಗಳಿಂದ ಮೊಬೈಲ್ ಬಂದಿದ್ದು ಈಗಿನ ಮಕ್ಕಳಿಗೆ ಹುಟ್ಟಿನಿಂದಲೇ ಮೊಬೈಲ್ ಗೀಳು ಬೆಳೆಸಿಕೊಳ್ಳುವ ಅವಕಾಶವಿದೆ. ಇದರಿಂದ ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆ ಕುಂಠಿತವಾಗುವ ಜೊತೆಗೆ ಒತ್ತಡವು ಹೆಚ್ಚಲಿದೆ. ಈ ನಿಟ್ಟಿನಲ್ಲಿ ಅನಾವಶ್ಯಕ ಮೊಬೈಲ್ ಬಳಕೆ ಕಡಿಮೆ ಮಾಡಿ ತಮ್ಮ ಆರೋಗ್ಯ ಮತ್ತು ಮಾನಸಿಕ ಸದೃಢತೆಗೆ ಹೆಚ್ಚಿನ ಒತ್ತು ನೀಡಲು ತಿಳಿಸಿದರು.

ಗ್ರಂಥಾಲಯಕ್ಕೆ ಪುಸ್ತಕಗಳು; ಗಾಂಧಿ ಭವನದಲ್ಲಿನ ಗ್ರಂಥಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಜಿಲ್ಲಾ ಆಡಳಿತಕ್ಕೆ ಮತ್ತು ನನಗೆ ನೀಡಲಾಗುವ ಪುಸ್ತಕಗಳನ್ನು ಈ ಗ್ರಂಥಾಲಯಕ್ಕೆ ಕಳುಹಿಸಲಾಗುತ್ತದೆ. ಓದುಗರು ಗಾಂಧಿ ಭವನದ ಗ್ರಂಥಾಲಯಕ್ಕೆ ಆಗಮಿಸಿ ದಿನಿತ್ಯದ ಪತ್ರಿಕೆಗಳು ಮತ್ತು ಇಲ್ಲಿ ಸಿಗುವ ಸ್ಪರ್ಧಾತ್ಮಕ ಪರೀಕ್ಷೆ, ಕಥೆ, ಕಾದಂಬರಿ ಕುರಿತ ಅತ್ಯುತ್ತಮವಾದ ಪುಸ್ತಕಗಳನ್ನು ಓದುವಂತಾಗಬೇಕೆಂದು ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ ಮಾತನಾಡಿ ವ್ಯಸನಗಳಿಗೆ ದಾಸರಾಗಬಾರದು, ಇತ್ತೀಚೆಗೆ ಹೆಚ್ಚುತ್ತಿರುವ ಪಾಶ್ಚಾತ್ಯ ಸಂಸ್ಕೃತಿಯಿಂದ ಈ ಸಂಖ್ಯೆ ಹೆಚ್ಚುತ್ತಿದೆ. ವ್ಯಸನ ಆರಂಭದಲ್ಲಿ ಕುತೂಹಲ ಹುಟ್ಟಿಸುತ್ತದೆ, ನಂತರ ಇದರ ಪರಿಣಾಮ ಆರಂಭವಾಗುತ್ತದೆ. ತಂಬಾಕು ಜಗಿಯುವವರು ಅನಾರೋಗ್ಯಕ್ಕೆ ಒಳಗಾಗಿ ಚಿಕಿತ್ಸೆಗೆ ಬಂದಾಗ ತಪ್ಪು ಮಾಡಿದೆ ಎಂದು ಹೇಳುತ್ತಾರೆ. ದೇಶ ಸದೃಡವಾಗಲು ಆರೋಗ್ಯವಂತ ಮಾನವ ಸಂಪನ್ಮೂಲ ಇರಬೇಕೆಂದು ತಿಳಿಸಿದರು. ನಿವೃತ್ತ ಪ್ರಾಂಶುಪಾಲರಾದ ದಾದಾಪೀರ್ ನವಿಲೆಹಾಳ್ ಕ್ವಿಟ್ ಇಂಡಿಯಾ ಚಳುವಳಿ ಕುರಿತಂತೆ ಉಪನ್ಯಾಸ ನೀಡಿ ಸ್ವಾತಂತ್ರ್ಯ ಚಳುವಳಿಯಲ್ಲಿ ಮಹಾತ್ಮ ಗಾಂಧೀಜಿಯವರ ಪಾತ್ರ ಪ್ರಮುಖವಾಗಿದೆ. 1857 ರ ಮೊದಲ ಸ್ವಾತಂತ್ರ್ಯ ಸಂಗ್ರಾಮದಿಂದ ಆರಂಭವಾದ ಚಳುವಳಿ ಸ್ವಾತಂತ್ರ್ಯ ಗಳಿಸಲು 90 ವರ್ಷಗಳ ಅವಧಿ ಬೇಕಾಯಿತು. ಮಹಾತ್ಮ ಗಾಂಧೀಜಿಯವರು ದಕ್ಷಿಣ ಆಫ್ರಿಕಾದಿಂದ ಭಾರತಕ್ಕೆ ಬಂದಾಗಿನಿಂದ ಅಸಹಕಾರ ಚಳುವಳಿ ಮೂಲಕ ಇದು ತೀವ್ರ ಸ್ವರೂಪ ಪಡೆದುಕೊಂಡಿತು. ಕಾನೂನುಭಂಗ ಚಳುವಳಿ, ಉಪ್ಪಿನಸತ್ಯಾಗ್ರಹ ನಂತರ ಅಂತಿಮ ಘಟ್ಟವಾಗಿ ಮಾಡು ಇಲ್ಲವೇ ಮಡಿ, ಭಾರತ ಬಿಟ್ಟು ಚಳುವಳಿಯಿಂದಾಗಿ ದೇಶಕ್ಕೆ ಸ್ವಾತಂತ್ರ್ಯ ನೀಡಲೇಬೇಕಾದ ಸ್ಥಿತಿಗೆ ತಲುಪಿದ್ದರಿಂದ ಕ್ವಿಟ್ ಇಂಡಿಯಾ ಚಳುವಳಿ ಬಹಳ ಮಹತ್ವವಾದ ಚಳುವಳಿಯಾಗಿರುತ್ತದೆ ಎಂದರು.

ಇಂದಿನ ವಿದ್ಯಾರ್ಥಿಗಳು ದೇಶದ ಸ್ವಾತಂತ್ರ್ಯ ಇತಿಹಾಸದ ಬಗ್ಗೆ ತಿಳಿದುಕೊಳ್ಳುವ ಮೂಲಕ ದೇಶದ ಬಗೆಗಿನ ಗೌರವ ಭಾವನೆ ಬೆಳೆಸಿಕೊಂಡು ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಣೆ ಮಾಡುವ ನಿಟ್ಟಿನಲ್ಲಿ ಪ್ರಯತ್ನ ತಮ್ಮದಾಗಿರಬೇಕೆಂದು ತಿಳಿಸಿದರು. ಮನೋವೈದ್ಯರಾದ ಡಾ; ಮರುಳಸಿದ್ದಪ್ಪ ಮಾತನಾಡಿ ಮದ್ಯ ಮತ್ತು ಮಾದಕ ವಸ್ತುಗಳಿಂದಾಗಿ ವ್ಯಕ್ತಿಗತವಾಗಿ ಮತ್ತು ಸಾಮಾಜಿಕವಾಗಿ ಸಾಕಷ್ಟು ನಷ್ಟವಾಗಲಿದೆ. ಈ ವಸ್ತುಗಳ ವ್ಯಸನಿಗಳಾಗಿದ್ದಲ್ಲಿ ಇದರಿಂದ ಮುಕ್ತಿ ಹೊಂದಲು ಚಿಕಿತ್ಸೆ ಲಭ್ಯವಿದೆ. ವ್ಯಸನ ಮುಕ್ತರನ್ನಾಗಿಸಲು ಚಿಗಟೇರಿ ಜಿಲ್ಲಾ ಆಸ್ಪತ್ರೆ ಮತ್ತು ಎಸ್.ಎಸ್. ಮತ್ತು ಬಾಪೂಜಿ ಆಸ್ಪತ್ರೆಯಲ್ಲಿ ಮನೋವೈದ್ಯರಿದ್ದು ಚಿಕಿತ್ಸೆ ಪಡೆಯಬಹುದಾಗಿದೆ ಎಂದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ, ಜಿಲ್ಲಾ ಮುಖ್ಯ ಗ್ರಂಥಾಲಯಾಧಿಕಾರಿ ಪಿ.ಆರ್. ತಿಪ್ಪೇಸ್ವಾಮಿ, ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ; ಮಂಜುನಾಥ ಪಾಟೀಲ್, ಪದವಿ ಪೂರ್ವ ಶಿಕ್ಷಣ ಇಲಾಖೆ ಕಾಲೇಜು ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ಪ್ರದೀಪ್‌ಕುಮಾರ್, ಗ್ರಾಮ ಸ್ವರಾಜ್ ಅಭಿಯಾನದ ಅವರಗೆರೆ ರುದ್ರಮುನಿ, ಜಿಲ್ಲಾ ಸ್ವಾತಂತ್ರ್ಯ ಯೋಧರ ಉತ್ತರಾಧಿಕಾರಿಗಳ ಸಂಘದ ಅಧ್ಯಕ್ಷರಾದ ಐಗೂರು ತಿಮ್ಮಣ್ಣ, ರೈತ ಮುಖಂಡರಾದ ತೇಜಸ್ವಿ ಪಟೇಲ್ ಹಾಗೂ ಎನ್.ಎಸ್.ಎಸ್. ಕಾರ್ಯಕ್ರಮ ಅಧಿಕಾರಿಗಳು ಉಪಸ್ಥಿತರಿದ್ದರು. ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯ.ಬಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್.ಎಸ್.ಎಸ್. ಜಿಲ್ಲಾ ಕಾರ್ಯಕ್ರಮ ಸಂಯೋಜನಾಧಿಕಾರಿ ನಾಗರಾಜ್ ನಿರೂಪಿಸಿದರು.

# ಎಸ್.ಎನ್.25ನೇ ವರ್ಷದ ಪುಣ್ಯಸ್ಮರಣೆ



» **ಚಿತ್ರದುರ್ಗ**

ರಾಷ್ಟ್ರ ನಾಯಕ, ಹಿರಿಯ ಮುತ್ಸದಿ ಎಸ್.ನಿಜಲಿಂಗಪ್ಪನವರ ತತ್ವಾರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಬೇಕಿದೆ ಎಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಹೇಳಿದರು.

ಸೀಬಾರ ಸಮೀಪವಿರುವ ಸ್ಮಾರಕದಲ್ಲಿ ಗುರುವಾರ ನಡೆದ ಎಸ್.ನಿಜಲಿಂಗಪ್ಪನವರ 25 ನೇ ವರ್ಷದ ಪುಣ್ಯಸ್ಮರಣೆಯಲ್ಲಿ ಅವರ ಭಾಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಪ್ರಪಂಚದ ಅಕ್ಕಪಕ್ಕದ ದೇಶಗಳಲ್ಲಿ ನಡೆಯುತ್ತಿರುವ ಅನಾಹುತಗಳನ್ನು ನೋಡುತ್ತಿದ್ದೇವೆ. ಬಾಂಗ್ಲಾದಲ್ಲಿ ಮೀಸಲಾತಿಗಾಗಿ ಭುಗಿಲೆದ್ದಿರುವ ಹಿಂಸಾಚಾರದಿಂದ ಅರಾಜಗಕತೆ ಉಂಟಾಗಿರುವುದಕ್ಕೆ ಮಾರ್ಗದರ್ಶನದ ಕೊರತೆ ಕಾರಣ. ನಮ್ಮ ದೇಶದಲ್ಲಿ ಆಧ್ಯಾತ್ಮ, ಸಂಸ್ಕಾರದ ಶಿಕ್ಷಣವಿದೆ. ನಿಷ್ಕಳಂಕ ರಾಜಕಾರಣಿಯಾಗಿದ್ದ ಎಸ್.ಎನ್.ರವರ ಭವಿಷ್ಯ ಭಾರತದ ದೃಷ್ಟಿಯಿಂದ ಅವರಲ್ಲಿದ್ದ ಚಿಂತನೆಗಳನ್ನು ಎಲ್ಲರಿಗೂ ತಿಳಿಸಬೇಕಿದೆ. ಇಲ್ಲಿ ಶಾಸಕರಿಗೆ, ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಶಿಬಿರಕ್ಕೆ ಶೀಘ್ರ ಚಾಲನೆ ಕೊಡಬೇಕಾಗಿರುವುದರಿಂದ ಸರ್ಕಾರ ಮತ್ತು ಜಿಲ್ಲಾಡಳಿತ ಸಹಕಾರ ಮುಖ್ಯ ಎಂದು ತಿಳಿಸಿದರು.

ಎಸ್.ಎನ್. ಸ್ಮಾರಕದ ಕಂಬಗಳು ಒಂದವರೆ ದಶಕದಿಂದ ಶಿಥಿಲಗೊಂಡಿವೆ. ಅನಾಹುತ ಸಂಭವಿಸುವ ಮುನ್ನ ಸರ್ಕಾರ ಜಿಲ್ಲಾಡಳಿತ ಎಚ್ಚೆತ್ತುಕೊಂಡು ರಿಪೇರಿ ಮಾಡಿಸಬೇಕೆಂದು ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಮನವಿ ಮಾಡಿದರು.

ಎಸ್.ಎನ್.ಸ್ಮಾರಕ ಟ್ರಸ್ಟ್ ಗೌರವ ಕಾರ್ಯದರ್ಶಿ ಹೆಚ್.ಹನುಮಂತಪ್ಪ, ಟ್ರಸ್ಟಿಗಳಾದ ಕೆ.ಇ.ಬಿ.ಷಣ್ಮುಖಪ್ಪ, ಎಂ.ಕೆ.ತಾಜ್‌ಪೀರ್, ರೋಟರಿ ಕ್ಲಬ್ ಅಧ್ಯಕ್ಷ ಜಿ.ಎನ್.ವೀರಣ್ಣ ರೊ.ವೀರಭದ್ರಸ್ವಾಮಿ, ರೊ.ಎಸ್.ವೀರೇಶ್, ಜಿ.ಎಂ.ಪ್ರಕಾಶ್, ನಾಗರಾಜ್ ಸಂಗಮ್, ಎಂ.ಕೆ.ಹಟ್ಟಿಯಲ್ಲಿರುವ ಬಸವೇಶ್ವರ ವಿದ್ಯಾಸಂಸ್ಥೆ ಹಾಗೂ ಮಹಿಳಾ ಸಹಾಯವಾಣಿ ಸಾಂತ್ವನ ಕೇಂದ್ರದ ಕಾರ್ಯದರ್ಶಿ ಶಂಕರಪ್ಪ ವಿ.ಕೆ. ತಮಟಕಲ್ಲು ಕರಿಬಸಪ್ಪ, ಧನಂಜಯ ಲಕ್ಷ್ಮಿಸಾಗರ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಜಯಣ್ಣ ಸೇರಿದಂತೆ ವಿಶ್ವಮಾನವ ಶಾಲೆಯ ನೂರಾರು ಮಕ್ಕಳು ಪುಣ್ಯಸ್ಮರಣೆಯಲ್ಲಿ ಪಾಲ್ಗೊಂಡಿದ್ದರು.

## ಬಾಲ್ಯವಿವಾಹ ಕುರಿತು ಜಾಗೃತಿ





» **ಚಿತ್ರದುರ್ಗ**

ಚಿತ್ರದುರ್ಗ ನಗರದ ಶ್ರೀ ಪಾರ್ಶ್ವನಾಥ ಪ್ರೌಢಶಾಲೆಯಲ್ಲಿ ಗುರುವಾರ ಬಾಲ್ಯ ವಿವಾಹ ಕುರಿತಾದ ಅರಿವು ಮತ್ತು ಜಾಗೃತಿ ಕಾರ್ಯಕ್ರಮ ನಡೆಯಿತು. ಶಿಶು ಅಭಿವೃದ್ಧಿ ಯೋಜನೆ ಮೇಲ್ವಿಚಾರಕಿ ಪಾವನ ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಶಾಲಾ ಮುಖ್ಯೋಪಾಧ್ಯಾಯರ ಮತ್ತು ಶಾಲಾ ಶಿಕ್ಷಕರ ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ಮತ್ತು ಬಾಲ್ಯ ವಿವಾಹದ ಬಗ್ಗೆ ಮಕ್ಕಳಲ್ಲಿ ಜಾಗೃತಿ ಹಾಗೂ ಮಕ್ಕಳ ಕಳ್ಳ ಸಾಗಾಣಿಕೆ ಬಗ್ಗೆ ಅರಿವು ಮೂಡಿಸಿದರು.ಚಿತ್ರದುರ್ಗ ನಗರ ಪೊಲೀಸ್ ಠಾಣೆ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಗಾದ್ರಿಲಿಂಗಪ್ಪ ಮಾತನಾಡಿ, ಹದಿಹರೆಯದ ಮಕ್ಕಳಲ್ಲಿ ಆಗುವ ದೈಹಿಕ ಮತ್ತು ಮಾನಸಿಕ ಬದಲಾವಣೆಗಳ ಬಗ್ಗೆ ಮತ್ತು ಅವುಗಳು ಉಂಟುಮಾಡುವಂತಹ ಪ್ರಚೋದನೆಗಳ ಬಗ್ಗೆ ವಿವರವಾಗಿ ಮಕ್ಕಳಿಗೆ ತಿಳಿಸಿದರು.ಬಾಲ್ಯ ವಿವಾಹ ಆದ ಸಂದರ್ಭದಲ್ಲಿ ಪೊಲೀಸ ಇಲಾಖೆಯನ್ನು ಸಂಪರ್ಕಿಸಲು ಮಕ್ಕಳಿಗೆ ಮಾಹಿತಿ ನೀಡಿದರು.ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬಾಲ್ಯ ವಿವಾಹ ನಡೆದ ಸಂದರ್ಭದಲ್ಲಿ ಮಕ್ಕಳ ಸಹಾಯವಾಣಿ 1098ಕ್ಕೆ ಮತ್ತು 112ಕ್ಕೆ ಕರೆ ಮಾಡಿ ಮಾಹಿತಿ ನೀಡುವಂತೆ ಮಕ್ಕಳಿಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಜಿ ಹರೀಶ್, ರವಿ, ಶಾಲೆಯ ಮುಖ್ಯ ಶಿಕ್ಷಕಿ ನಸೀಮಾ ಸೇರಿದಂತೆ ಶಾಲೆಯ ಶಿಕ್ಷಕರು, ನಗರಠಾಣೆಯ ಪೊಲೀಸ್ ಸಿಬ್ಬಂದಿ ಹಾಗೂ ಜಿಲ್ಲಾ ಮಿಷನ್ ಸಂಯೋಜಕ ಬಿ.ವಿನಯ್ ಇದ್ದರು.

## ಗೃಹಲಕ್ಷ್ಮಿಗೆ ಇಕೆವೈಸಿ, ಸ್ಮಾರ್ಟ್ ಕಾರ್ಡ್ ಸುಳ್ಳು ವದಂತಿಗೆ ಕಿವಿಗೊಡಬೇಡಿ

**ದಾವಣಗೆರೆ:** ರಾಜ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯ 11 ಮತ್ತು 12ನೇ ಕಂತುಗಳು ಜಮೆಯಾಗಲು ಸ್ವಲ್ಪ ತಡವಾಗಿದ್ದು ಇದನ್ನೇ ಬಂಡವಾಳ ಮಾಡಿಕೊಂಡು ಕೆಲವು ಸ್ಥಳೀಯ ಆನ್‌ಲೈನ್ ಸೆಂಟರ್‌ನವರು ಇಕೆವೈಸಿ ಮಾಡಿಸಬೇಕು, ಪಿಂಕ್ ಸ್ಮಾರ್ಟ್ ಕಾರ್ಡ್ ಇದ್ದರೆ ಮಾತ್ರ ಗೃಹಲಕ್ಷ್ಮಿ ಹಣ ಬರುತ್ತದೆ ಎಂಬ ಸುಳ್ಳು ವದಂತಿ ಹರಡುತ್ತಿದ್ದಾರೆ. ಫಲಾನುಭವಿಗಳನ್ನು ನಂಬಿಸಿ ಅವರಿಂದ ಇಂತಿಷ್ಟು ಹಣ ಪಡೆದುಕೊಂಡು ಎಡಿಟ್ ಮಾಡಿ ಡೂಪ್ಲಿಕೇಟ್ ಪಿಂಕ್ ಸ್ಮಾರ್ಟ್ ಕಾರ್ಡ್ ಮಾಡಿಕೊಟ್ಟು ವಂಚಿಸುತ್ತಿದ್ದಾರೆ. ಆದ್ದರಿಂದ ಇಂತಹ ವಂಚಕರಿಂದ ಜಾಗೃತರಾಗಿರಲು ತಿಳಿಸಿ ಸರ್ಕಾರ ಇಂತಹ ಕಾರ್ಡ್‌ಗಳಿಗೆ ಯಾವುದೇ ಅಧಿಕೃತ ಆದೇಶ ನೀಡಿರುವುದಿಲ್ಲ ಎಂದು ಹೊನ್ನಾಳಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

## 12ರಂದು ಪೂರ್ವಭಾವಿ ಸಭೆ

**ಚಿತ್ರದುರ್ಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲಾಮಟ್ಟದಲ್ಲಿ ಇದೇ ಆಗಸ್ಟ್ 20ರಂದು ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳಾದ ದಿ.ಡಿ.ದೇವರಾಜ ಅರಸುರವರ 109ನೇ ಜನ್ಮ ದಿನಾಚರಣೆಯನ್ನು ಆಚರಿಸಲು ಆಗಸ್ಟ್ 12ರಂದು ಮಧ್ಯಾಹ್ನ 12ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

## ಪ್ರಮುಖ ಸುದ್ದಿ

### ವಿದ್ಯಾರ್ಥಿನಿಲಯಗಳಲ್ಲಿ ಜಯಂತಿ ಆಚರಣೆಗೆ ಸೂಚನೆ, ತುಂಗಭದ್ರಾ ಸಭಾಂಗಣದಲ್ಲಿ ಶಿಷ್ಟಾಚಾರದನ್ವಯ ಆಯೋಜನೆ

# ಅಗಸ್ಟ್ 20 ರಂದು ಡಿ.ದೇವರಾಜ ಅರಸು ಜಯಂತಿ

» **ದಾವಣಗೆರೆ**

ಮಾಜಿ ಮುಖ್ಯಮಂತ್ರಿ ಅಭಿವೃದ್ಧಿ ಹರಿಕಾರ ಡಿ.ದೇವರಾಜ ಅರಸುರವರ 109 ನೇ ಜಯಂತಿಯನ್ನು ಆಗಸ್ಟ್ 20 ರಂದು ಎಲ್ಲಾ ಸರ್ಕಾರಿ ಕಚೇರಿ, ಶಾಲಾ, ಕಾಲೇಜು ಹಾಗೂ ಎಲ್ಲಾ ಹಾಸ್ಟೆಲ್‌ಗಳಲ್ಲಿ ಆಚರಣೆ ಮಾಡಲು ಮತ್ತು ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ತುಂಗಭದ್ರಾ ಸಭಾಂಗಣದಲ್ಲಿ ಶಿಷ್ಟಾಚಾರದನ್ವಯ ಹಮ್ಮಿಕೊಳ್ಳಲು ಬಿ.ಸಿ.ಎಂ. ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.



ಗುರುವಾರ(8) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಡಿ.ದೇವರಾಜು ಅರಸು ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆ.20 ರ ಬೆಳಿಗ್ಗೆ 11 ಗಂಟೆಗೆ ಬಿ.ಎಸ್.ಎನ್.ಎಲ್. ಕಚೇರಿ ಮುಂಭಾಗದಲ್ಲಿರುವ ಡಿ.ದೇವರಾಜ ಅರಸುರವರ ಪುತ್ಥಳಿಗೆ ಮಾಲಾರ್ಪಣೆ ಮತ್ತು ಪೂಜಾ ಕಾರ್ಯಕ್ರಮವನ್ನು ಮುಗಿಸಿ, ನಂತರ ಜಿಲ್ಲಾಡಳಿತ ಭವನದಲ್ಲಿರುವ ತುಂಗಾಭದ್ರ ಸಭಾಂಗಣದಲ್ಲಿ ವೇದಿಕೆ ಸಮಾರಂಭದ ಸಿದ್ದತೆ ಮಾಡಿಕೊಳ್ಳಲು ತಿಳಿಸಿದರು. ಪುತ್ಥಳಿ ಸ್ಥಳದಲ್ಲಿ ಸಂಚಾರ ದಟ್ಟಣೆ ಹೆಚ್ಚಾಗದಂತೆ ನಿರ್ವಹಣೆ ಮಾಡಲು ತಿಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಅರಸು ಕುರಿತಂತೆ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲುಮತ್ತುಎಲ್ಲಾಹಾಸ್ಟೆಲ್‌ಗಳಲ್ಲಿ ಅರಸುರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಆಯೋಜಿಸಲು ತಿಳಿಸಿ ಅರಸು ಕುರಿತ ಮಾಹಿತಿಯುಳ್ಳ ಕಿರುಪುಸ್ತಕಗಳನ್ನು ಸಂಗ್ರಹಿಸಿ ನೀಡಲು ಮತ್ತು ಕಾರ್ಯಕ್ರಮದ ಸ್ಥಳದಲ್ಲಿ ಅಚ್ಚುಕಟ್ಟಾಗಿ ಎಲ್ಲಾ ವ್ಯವಸ್ಥೆ ಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗಾಯತ್ರಿ ಅವರು ಹಾಸ್ಟೆಲ್‌ನ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಭಾಷಣ, ಕ್ರೀಡೆ, ಡಿ.ದೇವರಾಜ ಅರಸು ಭಾವಚಿತ್ರ ಬಿಡಿಸುವುದು, ರಂಗೋಲಿ ಸ್ಪರ್ಧೆಗಳನ್ನು ಆಯೋಜಿಸಿ, ಬಹುಮಾನಗಳನ್ನು ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಪಾಲಿಕೆ ಆಯುಕ್ತರಾದ ರೇಣುಕಾ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ, ಅಲೆಮಾರಿ, ಅರೆ ಅಲೆಮಾರಿ ಜನಾಂಗದ ಅಧ್ಯಕರಾದ ತಿಪ್ಪೇಶ್, ಯಾದವ ಸಮಾಜದ ಖಜಾಂಚಿ ಏಕಾಂತಪ್ಪ, ಗೊಂದಾಳಿ ಸಮಾಜದ ವೀರೇಶ್ ರಾವ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T